ಸಂಪುಟ : 10 ಸಂಚಿಕೆ 6 ಪುಟ : 4+2 ಬೆಲೆ: 3.00 ಶುಕ್ರವಾರ ಜನವರಿ 31 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 6 Pages : 4+2 Price : 3.00 Friday January 31 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## 'ಸ್ವರ ನಮನ' ಕಾರ್ಯಕ್ರಮ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ



ಭಾರತರತ್ನ ಪಂ. ಭೀಮಸೇನ್ ಜೋಶಿ ಪ್ರತಿಷ್ಠಾನದ ವತಿಯಿಂದ ಗದುಗಿನ ಹೆಮ್ಮೆಯ ಪುತ್ರ ಭಾರತರತ್ನ ಪಂಡಿತ್ ಭೀಮಸೇನ ಜೋಶಿಯವರ ಪುಣ್ಯಸ್ಮರಣೆಯ ನಿಮಿತ್ತ ಫೆಬ್ರವರಿ 1ರ ಸಾಯಂಕಾಲ 6 ಗಂಟೆಗೆ ಗದುಗಿನ ವಕೀಲಚಾಳದಲ್ಲಿರುವ ಮರಾಠಿ ವಾಙ್ಮಯಿ ಪ್ರೇಮಿ ಮಂಡಳದಲ್ಲಿ 'ಸ್ವರ ನಮನ' ಕಾರ್ಯಕ್ರಮ ಜರುಗಲಿದೆ.

ಖ್ಯಾತ ವೈದ್ಯರಾದ ಡಾ. ಧನೇಶ ದೇಸಾಯಿ ಸಮಾರಂಭವನ್ನು ಉದ್ಘಾಟಿಸುವರು. ಖ್ಯಾತ ವೈದಿಕ ವಿದ್ವಾಂಸರಾದ ವೇ.ಮೂ. ರತ್ನಾಕರಭಟ್ ಜೋಶಿ ಮುಖ್ಯ ಅತಿಥಿಗಳಾಗಿ ಉಪಸ್ಥಿತರಿರುವರು. ಪಂ. ಭೀಮಸೇನ ಜೋಶಿ ಪ್ರತಿಷ್ಠಾನದ ಅಧ್ಯಕ್ಷರಾದ ಪಂಡಿತ್ ಅರವಿಂದ ಹುಯಿಲಗೋಳಕರ ಅಧ್ಯಕ್ಷತೆ ವಹಿಸುವರು.

ಪದ್ಮವಿಭೂಷಣ ಡಾ.ಗಂಗೂಬಾಯಿ ಹಾನಗಲ್‌ರವರ ಶಿಷ್ಯರಾದ ಕುಂದಗೋಳದ ಪಂ. ಅಶೋಕ ನಾಡಗೀರ ಹಿಂದುಸ್ತಾನಿ ಶಾಸ್ತ್ರೀಯ ಸಂಗೀತ, ಸಂತವಾಣಿ ಹಾಗೂ ಭಜನ್ ಕಾರ್ಯಕ್ರಮ ನಡೆಸಿಕೊಡುವರು. ವಿಠ್ಠಲ ಕಟ್ಟೆಣ್ಣವರ ಸಂವಾದಿನಿ ಹಾಗೂ ಕೃಷ್ಣಕುಮಾರ ಕುಲಕರ್ಣಿ ತಬಲಾಸಾಥ್ ನೀಡುವರು. ಸರ್ವರಿಗೂ ಭೀಮಸೇನ್ ಜೋಶಿ ಪ್ರತಿಷ್ಠಾನದ ಸರ್ವ ಸದಸ್ಯರು ಸ್ವಾಗತ ಕೋರಿದ್ದಾರೆ.

### ಚಿಕೇನಕೊಪ್ಪದ ಚನ್ನವೀರ ಶರಣರ 30ನೇ ಪುಣ್ಯಸ್ಮರಣೋತ್ಸವದ ಕುರಿತು ಶಿವಶಾಂತವೀರ ಶರಣರ ಮಾಹಿತಿ'

# ಚಿಕೇನಕೊಪ್ಪ ಜಾತ್ರಾ ಮಹೋತ್ಸವ ಫೆ.3ರಿಂದ

■ ವಿಜಯಸಾಕ್ಷಿ ಸುದ್ದಿ, ಗದಗ

ಮೌನಯೋಗಿ ಚಿಕೇನಕೊಪ್ಪದ ಚನ್ನವೀರ ಶರಣರ 30ನೇ ಪುಣ್ಯಸ್ಮರಣೋತ್ಸವ ಹಾಗೂ ಜಾತ್ರಾ ಮಹೋತ್ಸವ ಫೆ.3ರಿಂದ 5ರವರೆಗೆ ನೆರವೇರಲಿದೆ. ಜಾತ್ರಾ ಮಹೋತ್ಸವದ ನಿಮಿತ್ತ ಮಹಾತ್ಮರ ಜೀವನ ದರ್ಶನ ಪ್ರವಚನ, ಮಹಾರಥೋತ್ಸವ, ಲಘು ರಥೋತ್ಸವ, ಜಾನಪದ ಕಲಾಮೇಳ, ಸುಮಂಗಲೆಯರಿಗೆ ಉಡಿ ತುಂಬುವದು, ಸಾಮೂಹಿಕ ವಿವಾಹ, ತುಲಾಬಾರ, ಧಾರ್ಮಿಕ ಚಿಂತನ ಗೋಷ್ಠಿ, 'ಶರಣಶ್ರೀ' ಪ್ರಶಸ್ತಿ ಪ್ರದಾನ ಕಾರ್ಯಕ್ರಮಗಳು ನಡೆಯಲಿವೆ ಎಂದು ಬಳಗಾನೂರಿನ ಚಿಕೇನಕೊಪ್ಪದ ಚನ್ನವೀರ ಶರಣರ ಮಠದ ಶಿವಶಾಂತವೀರ ಶರಣರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಶಿವಶಾಂತವೀರ ಶರಣರು ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು.

ಫೆ.3ರಂದು ಬೆಳಿಗ್ಗೆ 8ಕ್ಕೆ ಕುಷ್ಟಗಿಯ ಮದ್ದಾನಿ ಹಿರೇಮಠದ ಕರಿಬಸವ ಶಿವಾಚಾರ್ಯ ಸ್ವಾಮೀಜಿ ಹಾಗೂ ಹಿರೇವಡ್ಡಟ್ಟಿ ಹಿರೇಮಠದ ವೀರೇಶ್ವರ ಶಿವಾಚಾರ್ಯ ಸ್ವಾಮೀಜಿಗಳಿಂದ ಧ್ವಜಾರೋಹಣ ನೆರವೇರಲಿದೆ. ಸಂಜೆ 5ಕ್ಕೆ ಪ್ರಕಾಶ ಹುಗ್ಗಿ ಹಾಗೂ ಶರಣರ ಬಳಗ ರೋಣ ಅವರ ಮಹಾಮನೆಯಿಂದ ರಥದ ಕಳಸ ಆಗಮಿಸುವದು. ಸಂಜೆ 6ಕ್ಕೆ ಲಘು ರಥೋತ್ಸವ ನಡೆಯಲಿದೆ ಎಂದರು.




ಫೆ.3ರಂದು ಸಂಜೆ 7ಕ್ಕೆ ಮಹಾತ್ಮರ ಜೀವನ ದರ್ಶನ ಪ್ರವಚನ ಮಂಗಲೋತ್ಸವ ಜರುಗುವದು. ಹೂವಿನ ಹಡಗಲಿ ಗವಿಮಠದ ಡಾ. ಹಿರಿಯ ಶಾಂತವೀರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಫೆ.4ರಂದು ಬೆಳಿಗ್ಗೆ 5ಕ್ಕೆ ಚನ್ನವೀರ ಶರಣರ ಕರ್ತೃ ಗದ್ದುಗೆಗೆ ಮಹಾರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ ಹಾಗೂ ಲಿಂಗದೀಕ್ಷೆ-ಅಯ್ಯಾಚಾರ ಜರುಗಲಿದೆ ಎಂದು ಹೇಳಿದರು.

ಫೆ.4ರಂದು ವಿವಾಹ ಮಹೋತ್ಸವ ಜರುಗಲಿದೆ. ಈ ಕಾರ್ಯಕ್ರಮದಲ್ಲಿ ಸುಕ್ಷೇತ್ರ ಹಿರೇಮಾಗಡಿಯ ಶಿವಮೂರ್ತಿ ಮುರಘರಾಜೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ನಂತರ ಗೀತಾ ಭತ್ತದ ಹಾಗೂ ಸಂಗಡಿಗರಿಂದ ಸಂಗೀತ ಕಾರ್ಯಕ್ರಮ ಜರುಗುವುದು. ಈ ವೇಳೆ ಸಾಹಿತ್ಯ ಕ್ಷೇತ್ರದಲ್ಲಿ ರಾಜ್ಯ ಪ್ರಶಸ್ತಿ ಪಡೆದ ಗುಂಡೂರಿನ ಎಸ್.ವಿ. ಪಾಟೀಲ ಅವರಿಗೆ ಸಿದ್ದಲಿಂಗನಗೌಡ ಜಂಗ್ಲೆಪ್ಪಗೌಡ್ರ ಮೆಮೋರಿಯಲ್ ಉಮಾ ವಿದ್ಯಾಶ್ರೀ ಟ್ರಸ್ಟ್ ನವಲಗುಂದ ಸಂಯುಕ್ತಾಶ್ರಯದಲ್ಲಿ 'ಶರಣಶ್ರೀ' ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಎ.ಎನ್. ನಾಗರಳ್ಳಿ, ವಿ.ಬಿ. ಪೊಲೀಸ್‌ಪಾಟೀಲ, ಎಂ.ಬಿ. ಸಿಕ್ಕೆದೇಸಾಯಿ, ವಿ.ಎಸ್. ಹಿರೇಮಠ, ಎಸ್.ಬಿ. ಪಾಟೀಲ, ಎಸ್.ಎಸ್. ಪಾಟೀಲ ಇದ್ದರು.

> ಫೆ.4ರಂದು ಬಳಗಾನೂರಿನ ಶರಣರ ಬಳಗ ಹಾಗೂ ಡಾ.ಶಿವಕುಮಾರಯ್ಯ ಹಿರೇಮಠ ಮಹಾಮನೆಯಿಂದ ರಥದ ಹಗ್ಗವನ್ನು ತರಲಾಗುವದು. ಸಂಜೆ 5ಕ್ಕೆ ಜಗದ್ಗುರುಗಳು, ಹರಗುರು ಚರ ಮೂರ್ತಿಗಳ ನೇತೃತ್ವದಲ್ಲಿ ಮಹಾರಥೋತ್ಸವ ಜರುಗುವದು. ಸಂಜೆ 6ಕ್ಕೆ ಧಾರ್ಮಿಕ ಚಿಂತನಗೋಷ್ಠಿ ನಡೆಯಲಿದ್ದು, ಗವಿಮಠದ ಜಗದ್ಗುರು ಗವಿಸಿದ್ದೇಶ್ವರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಲಿದ್ದಾರೆ. ಫೆ.5ರಂದು ಸಂಜೆ 5ಕ್ಕೆ ಕಡುಬಿನ ಕಾಳಗ ಹಾಗೂ ಶರಣರ ಬೆಳ್ಳಿಮೂರ್ತಿ ಉತ್ಸವ ನಡೆಯಲಿದೆ ಎಂದು ಶ್ರೀಗಳು ತಿಳಿಸಿದರು.



ಗದಗ: ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಹುತಾತ್ಮ ದಿನದ ಅಂಗವಾಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಎರಡು ನಿಮಿಷಗಳ ಮೌನಾಚರಣೆ ಆಚರಿಸುವ ಮೂಲಕ ಸರ್ವೋದಯ ದಿನ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ. ಸೇರಿದಂತೆ ವಿವಿಧ ಇಲಾಖೆ ಅಧಿಕಾರಿ, ಸಿಬ್ಬಂದಿಗಳು ಮೌನಾಚರಣೆ ಆಚರಿಸುವ ಮೂಲಕ ಗೌರವ ಸಮರ್ಪಿಸಿದರು.

### ಮೈಕ್ರೋ ಫೈನಾನ್ಸ್ ಕಚೇರಿಯಲ್ಲಿ ಆರ್ಥಿಕ ವಿವರದ ಫಲಕ ಕಡ್ಡಾಯ | ಮೈಕ್ರೋ ಫೈನಾನ್ಸ್‌ದಾರರ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು

# ಕಿರುಕುಳ ನೀಡಿದರೆ ಸಹಾಯವಾಣಿಗೆ ಕರೆ ಮಾಡಿ



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಮೈಕ್ರೋ ಫೈನಾನ್ಸ್, ವಿವಿಧ ಹಣಕಾಸು ಸಂಸ್ಥೆ ಹಾಗೂ ಲೇವಾದೇವಿಗಾರರು ಸಾಲ ವಸೂಲಾತಿಯಲ್ಲಿ ನಿಯಮ ಬಾಹಿರವಾಗಿ ನಡೆದುಕೊಂಡಲ್ಲಿ ತಕ್ಷಣ ಪ್ರಕರಣ ದಾಖಲಿಸಿ, ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಗುರುವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ ಜಿಲ್ಲಾಡಳಿತದಿಂದ ಆಯೋಜಿಸಿದ್ದ ಮೈಕ್ರೋ ಫೈನಾನ್ಸ್ ಕಂಪನಿಗಳ ಸಾಲ ವಸೂಲಾತಿ ನೆಪದಲ್ಲಿ ಸಾಲಗಾರರಿಗೆ ಆಗುತ್ತಿರುವ ಕಿರಕುಳ ಹಿನ್ನೆಲೆಯಲ್ಲಿ ಮೈಕ್ರೋ ಫೈನಾನ್ಸ್, ಫೈನಾನ್ಸ್ ಕಾರ್ಪೋರೇಷನ್ಸ್, ಲೇವಾದೇವಿಗಾರರು, ಗಿರವಿದಾರರು ಹಾಗೂ ಸಂಬಂಧಿಸಿದ ಇಲಾಖೆ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮೈಕ್ರೋ ಫೈನಾನ್ಸ್‌ಗಳು ಭಾರತೀಯ ರಿಸರ್ವ್ ಬ್ಯಾಂಕ್ ನಿಯಮದ ಪ್ರಕಾರ ವ್ಯವಹಾರ ನಡೆಸಬೇಕು. ಸಾಲದ ಕಾರಣಕ್ಕೆ ಜೀವ ಹಾನಿ ಆಗಬಾರದು. ನಿರ್ದಿಷ್ಟಪಡಿಸಿರುವ ನಿಯಮಗಳ ಚೌಕಟ್ಟಿನಲ್ಲಿ ಸಾಲ ವಸೂಲಾತಿ ಆಗಬೇಕೇ ಹೊರತು, ಯಾವುದೇ ರೀತಿಯಲ್ಲಿ ಸಾಲಗಾರರಿಗೆ

▶▶ 3ನೇ ಪುಟಕ್ಕೆ

> ಸರ್ಕಾರ ಬೆಂಬಲ ಬೆಲೆ ಯೋಜನೆಯಡಿ ಈರುಳ್ಳಿಯನ್ನು ಖರೀದಿಸಬೇಕು ಹಾಗೂ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿಯಲ್ಲಿ ಇನ್ಶೂರೆನ್ಸ್ ಕಂಪನಿ ಈರುಳ್ಳಿ ಬೆಳೆಗೆ ವಿಮೆ ತುಂಬಿಸಿಕೊಂಡಿದ್ದು ಬೇಗನೆ ಬೆಳೆ ಸಮೀಕ್ಷೆ ನಡೆಸಿ ಬೆಳೆ ವಿಮೆ ಪರಿಹಾರ ಬಿಡುಗಡೆ ಮಾಡಬೇಕು. ಬೇಡಿಕೆ ಈಡೇರದಿದ್ದರೆ ಮುಂದಿನ ದಿನಗಳಲ್ಲಿ ಜಿಲ್ಲಾದ್ಯಂತ ಹೋರಾಟ ಮಾಡಲಾಗುವುದು.
> –ಯಲ್ಲಪ್ಪ ಎಚ್ ಬಾಬರಿ, ಜಿಲ್ಲಾಧ್ಯಕ್ಷರು, ಹಸಿರು ಸೇನೆ, ನಾರಾಯಣರೆಡ್ಡಿ ಬಣ


## ಗದಗ-ಬೆಟಗೇರಿ: ವಿವಿಧೆಡೆ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜನವರಿ 31ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 8, 9, 10 ಹೆಲ್ತ್ ಕ್ಯಾಂಪ್, ಶಿರಹಟ್ಟಿ ಓಣಿ, ಪೊಲೀಸ್ ಕ್ವಾರ್ಟರ್ಸ್, ಕುರಟ್ಟಿ ಪೇಟೆ, ತೆಗ್ಗಿನ ಪ್ಲಾಟ್, ಕಬಾಡಿ ರಸ್ತೆ, ಬಸವೇಶ್ವರ ರಸ್ತೆ, ಉಳಿದ ಕೆಲವು ಭಾಗಗಳು, ವಾರ್ಡ್ ನಂ. 30, 34, ವಡ್ಡರಗೇರಿ, ಕೊರವರ್ ಓಣಿ, ಮೂರಶಿಳ್ಳಿನ್ ವಕಾರ್, 46 ಪ್ಲಾಟ್, ಡಿಪೋ ಹಿಂದಿನ ಭಾಗಗಳು, ಶಿವಾನಂದ್ ಗಾರ್ಡನ್ ಕೆಲವು ಉಳಿದ ಭಾಗಗಳು, ವಾರ್ಡ್ ನಂ. 2 ಕುಷ್ಟಗಿ ಚಾಳ, ವೆಲ್ಫೇರ್ ಟೌನ್ ಶಿಪ್, ಸ್ಲ್ಯಾಬ್ ಮನೆ, ವಾರ್ಡ್ ನಂ. 22 ದಖಿನಿ ಗಲ್ಲಿ, ಪಾಮದೇವರ್ ಲೈನ್, ಈಶ್ವರ್ ಗುಡಿ ಲೈನ್, ನಿಂಗಪ್ಪ ಸಫಾರಿ ಅವರ್ ಲೈನ್, ಅಕ್ಕಿಯವರ್ ಲೈನ್, ಗಾರ್ಡನ್ ಲೈನ್, ಉಳಿದ ಕೆಲವು ಭಾಗಗಳು, ವಾರ್ಡ್ ನಂ. 21, 23 ಕಗ್ಗನಲ್ಲಿ, ಹಾರೂಗೇರಿ ಭಾಗ 2, ಹೆಬಸೂರ್ ಲೈನ್, ಹೊನ್ನೆತ್ತಮ್ಮನ್ ಗುಡಿ ಲೈನ್ 2 ಭಾಗ, ಬನ್ನಿ ಮಹಾಕಾಳಿ ದೇವಸ್ಥಾನ, ಸೋಮನಗೌಡ್ರ, ವಿಭೂತಿ ಓಣಿ,2 ಭಾಗ, ಹನಮನ ಗರಡಿ, ದ್ರೌಪದಿ ಲೈನ್, ಕಮತರ ಓಣಿ, ಗೆಳೆಯರ ಬಳಗ, ಜಂತ್ಲಿ ಓಣಿ, ಹೊಸ- ಹಳೆ ಲೈನ್,

ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲಿ ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.






## ದೈಹಿಕ ಶಿಕ್ಷಕ ಪ್ರಕಾಶ ಕಾಳೆಯವರು ಸೇವಾ ನಿವೃತ್ತಿ ಹೊಂದಲಿರುವ ನಿಮಿತ್ತ ಲೇಖನ


# ಕ್ರೀಡೆಯೇ ಸರ್ವಸ್ವವೆಂದ ಪ್ರಕಾಶ ಕಾಳೆ

ಪ್ರಕಾಶ ಕಾಳೆಯವರು ಎಸ್.ಆರ್.ಎ.ಜಿ.ಎ. ಪ್ರೌಢಶಾಲೆಯಲ್ಲಿ ದೈಹಿಕ ಶಿಕ್ಷಕರಾಗಿ 01-07-1997ರಿಂದ ಸುದೀರ್ಘ 28 ವರ್ಷ 6 ತಿಂಗಳ ಸೇವೆಯನ್ನು ಸಲ್ಲಿಸಿ, 31-01-2025ರಂದು ಸೇವಾ ನಿವೃತ್ತಿಯನ್ನು ಹೊಂದಲಿದ್ದಾರೆ. ಇವರಿಗೆ ಮಾಜಿ ಶಾಸಕ ಡಿ.ಆರ್. ಪಾಟೀಲ ಸದಾ ಬೆಂಬಲವಾಗಿ ನಿಂತು, ಸಂಸ್ಥೆಯಲ್ಲಿ ಸೇವೆ ಮಾಡಲು ಅವಕಾಶ ಮಾಡಿಕೊಟ್ಟಿದ್ದಾರೆ.

ಕಾಳೆಯವರು 01-02-1965ರಂದು ಹುಯಿಲಗೋಳ ಗ್ರಾಮದ ಚಂದಪ್ಪ-ಸುಮಿತ್ರವ್ವ ಕಾಳೆ ದಂಪತಿಗಳಿಗೆ ಮೂರನೇ ಮಗನಾಗಿ ಜನಿಸಿದರು. ಪ್ರಾಥಮಿಕ ಶಾಲೆಯನ್ನು ಸ್ವ-ಗ್ರಾಮದಲ್ಲಿ ಮುಗಿಸಿ, ಮಾಧ್ಯಮಿಕ ಶಾಲೆಯನ್ನು ಎಚ್.ಸಿ.ಇ.ಎಸ್. ಪ್ರೌಢಶಾಲೆ, ಗದಗದಲ್ಲಿ ಮುಗಿಸಿ ಮುಂದೆ ಕೆ.ವ್ಹಿ.ಎಸ್.ಆರ್. ಪ.ಪೂ. ಕಾಲೇಜಿನಲ್ಲಿ ಪಿ.ಯು.ಸಿ. ಮುಗಿಸಿದರು. ತರುವಾಯ ಜೆ.ಟಿ. ಕಾಲೇಜು, ಗದಗದಲ್ಲಿ ಪದವಿಯನ್ನು ಮುಗಿಸಿದರು.

ಮುಂದೆ ಧಾರವಾಡದ ಮಲ್ಲಸರ್ಜನ ವ್ಯಾಯಾಮ ಶಾಲೆಯಲ್ಲಿ ದೈಹಿಕ ಶಿಕ್ಷಣ ತರಬೇತಿಯನ್ನು ಪಡೆದರು. ಇವರು ಕಾಲೇಜು ದಿನಗಳಲ್ಲಿ ಅನೇಕ ಪ್ರಶಸ್ತಿಗಳನ್ನು ಪಡೆದುಕೊಂಡಿದ್ದಾರೆ. ಮದನಪುರಿ ಗುರುಗಳು ಹಾಗೂ ವೆಂಕಣ್ಣ ಮರೆಗುದ್ದಿ ಮಾರ್ಗದರ್ಶನದಲ್ಲಿ ಒಳ್ಳೆಯ ಕ್ರೀಡಾಪಟುವಾಗಿ ಹೊರಹೊಮ್ಮಿದರು. ಕ್ರೀಡಾಪಟುಗಳಿಗೆ ತರಬೇತಿ ನೀಡಿ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಭಾಗವಹಿಸಿ ಇವರ ಅನೇಕ ವಿದ್ಯಾರ್ಥಿಗಳು ಪ್ರಶಸ್ತಿಗಳನ್ನು ಪಡೆಯುವಲ್ಲಿ ಶ್ರಮಿಸಿದರು.

ಇವರು ಸ್ವ-ಗ್ರಾಮವಾದ ಹುಯಿಲಗೋಳದಲ್ಲಿ ಸ್ವಾಮಿ ವಿವೇಕಾನಂದ ಯುವಕ ಸಂಘದಿಂದ 36 ವರ್ಷಗಳವರೆಗೆ ಜಿಲ್ಲೆ ಮತ್ತು ರಾಜ್ಯಮಟ್ಟದ ಟೂರ್ನಾಮೆಂಟ್‌ಗಳನ್ನು ನಡೆಸಿದ್ದಲ್ಲದೇ ರಾಜ್ಯದಲ್ಲಿ



ಹುಯಿಲಗೋಳ ಗ್ರಾಮದ ಕಬ್ಬಡ್ಡಿ ತಂಡವನ್ನು ಗುರುತಿಸುವಲ್ಲಿ ಇವರ ಶ್ರಮ ಸಾಕಷ್ಟಿದೆ.

ಇವರು ಡಿ.ಎಸ್.ಎಸ್ ಸೇರಿದಂತೆ ಅನೇಕ ಸಾಮಾಜಿಕ ಸಂಘಟನೆಗಳಲ್ಲಿ ಭಾಗವಹಿಸಿ ಅನೇಕ ಹೋರಾಟಗಳನ್ನು ಮಾಡಿ ದಲಿತ ಯುವಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಿಕೊಡುವಲ್ಲಿ ಶ್ರಮವಹಿಸಿದ್ದಾರೆ. ಅಂಬೇಡ್ಕರರ ತತ್ವಗಳನ್ನು ಇಂದಿಗೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಅವರ ತತ್ವಗಳನ್ನು ಪಾಲಿಸಿ ನಡೆದುಕೊಂಡಿದ್ದಾರೆ. ಕಾಳೆಯವರ ಏಳಿಗೆಗೆ ಇವರ ಮಾವನವರಾದ ಜಕ್ಕಪ್ಪನವರು ವಿಶೇಷ ಮಾರ್ಗದರ್ಶನ ಮಾಡಿರುವುದನ್ನು ಸ್ಮರಿಸಬೇಕಿದೆ.

ಪ್ರಕಾಶರವರು ತುಂಬು ಕುಟುಂಬದಿಂದ ಬಂದವರು. ಇವರ ತಾಯಿಯವರಾದ ಸುಮಿತ್ರಾಬಾಯಿ ಕಾಳೆ ಆಶೀರ್ವಾದವೇ ಇವರಿಗೆ ಶ್ರೀರಕ್ಷೆ. ಇವರಿಗೆ ಇಬ್ಬರು ಸಹೋದರಿಯರು, ಪತ್ನಿ ಪ್ರೇಮಾ ಅವರು ಇವರ ಶ್ರೇಯಸ್ಸಿಗೆ ಶ್ರಮವಹಿಸಿ ತುಂಬು ಕುಟುಂಬವನ್ನು ನಿಭಾಯಿಸುವಲ್ಲಿ ಅನವರತ ಶ್ರಮಿಸಿದರು.

ಕಾಳೆಯವರು ಮಕ್ಕಳು, ಮೊಮ್ಮಕ್ಕಳೊಂದಿಗೆ ಸುಖಕರ ನಿವೃತ್ತಿಯ ಜೀವನವನ್ನು ಸಾಗಿಸುವಂತಾಗಲಿ ಮತ್ತು ಅವರಿಗೆ ಆಯುರಾರೋಗ್ಯ ಕೊಟ್ಟು ಆ ದೇವರು ಕಾಪಾಡಲೆಂದು ಕೆ.ವ್ಹಿ.ಎಸ್.ಆರ್. ಕಾಲೇಜಿನ 1984ನೇ ಪಿ.ಯು.ಸಿ. ಬ್ಯಾಚಿನ ಗೆಳೆಯರಾದ ಎಚ್.ಎನ್. ಚಿಗರಿ, ಡಾ. ವರ್ಧನ ಬಿ.ಕೆ.ಎಸ್., ಶಿವಕುಮಾರ ಕಾಳೆ, ಎಚ್.ಕೆ. ದೊಡ್ಡಮನಿ, ಎಸ್.ಟಿ. ಹರಿಜನ, ಬಿ.ಎಮ್. ಶಿವಪೂರ (ಮಾದರ), ಪಿ.ಎಸ್. ತಳವಾರ, ಆನಂದ ತಳವಾರ, ಆನಂದ ತಿಮ್ಮಾಪೂರ, ಸಿ.ಎನ್. ಕಲಕೋಟಿ, ಎಸ್.ಎಸ್. ಗುಜಮಾಗಡಿ, ನರ್ತಿ ಬಿ.ಎಲ್., ಹ್ಯಾಟಿ ಮುಂತಾದವರು ಶುಭ ಹಾರೈಸಿದ್ದಾರೆ.

**- ಎಚ್.ಎನ್. ಚಿಗರಿ.**

## ಸಾಮಾಜಿಕ ಸುಧಾರಣಾ ವೇದಿಕೆಗೆ ನೇಮಕ

**■ ವಿಜಯಸಾಕ್ಷಿ ಸುದ್ದಿ, ಗದಗ**



ಡಾ. ವ್ಹಿ.ವ್ಹಿ. ಹಿರೇಮಠರವರನ್ನು 1ನೇ ಜನವರಿ 2025ಕ್ಕೆ ಅನ್ವಯವಾಗುವಂತೆ ಗದಗ ಜಿಲ್ಲೆಯ ಸಾಮಾಜಿಕ ಸುಧಾರಣಾ ವೇದಿಕೆಗೆ ಅಧ್ಯಕ್ಷರನ್ನಾಗಿ ನೇಮಕ ಮಾಡಿದೆ.

ಡಾ. ವ್ಹಿ.ವ್ಹಿ. ಹಿರೇಮಠರು ಹಲವಾರು ಕೃತಿಗಳನ್ನು ರಚಿಸಿದ್ದಾರೆ. ನಿರಂತರವಾಗಿ ಸಮಾಜ ಸೇವೆ ಮತ್ತು ಸಾಹಿತ್ಯ ಸೇವೆ ಮಾಡುತ್ತಾ ಬಂದಿದ್ದಾರೆ. ಇವರ ಸಾಮಾಜಿಕ ಹಾಗೂ ಸಾಹಿತ್ಯ ಸೇವೆಗೆ ಹಲವಾರು ಪ್ರಶಸ್ತಿಗಳು ಕೂಡ ಬಂದಿವೆ. ಇವರು ಸಂಘಟನೆಯ ನಿರ್ದೇಶನ ಹಾಗೂ ನಿಯಮಗಳಿಗನುಸಾರವಾಗಿ ತಮ್ಮದೇ ಆದ ತಂಡವನ್ನು ರಚಿಸಿಕೊಂಡು, ಗದಗ ಜಿಲ್ಲೆಯ ಹಿತಾಸಕ್ತಿಗೆ ಕಾರ್ಯ ನಿರ್ವಹಿಸಲಿದ್ದಾರೆ ಎಂದು ವೇದಿಕೆ ಅಧ್ಯಕ್ಷರಾದ ಭಾರತ್ ಧ್ವಜ್ ತಿಳಿಸಿದ್ದಾರೆ.

### 58ನೇ ಶಿವಾನುಭವಗೋಷ್ಠಿಯಲ್ಲಿ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ

## ವಿದ್ಯಾರ್ಥಿಗಳು ನಕಾರಾತ್ಮಕ ಭಾವನೆಗಳಿಂದ ದೂರವಿರಿ

**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವಿದ್ಯಾರ್ಥಿಗಳು ತಮ್ಮ ಭವಿಷ್ಯ ಜೀವನ ಉತ್ತಮವಾಗಿರಬೇಕೆಂಬ ಮನಸ್ಸು ಹೊಂದಿದ್ದರೆ ಮೊದಲು ನಕರಾತ್ಮಕ ಭಾವನೆಗಳಿಂದ ದೂರವಿರಬೇಕು. ನಿಮ್ಮಲ್ಲಿ ಧನಾತ್ಮಕ ಭಾವನೆಗಳನ್ನು, ಯೋಚನೆಗಳನ್ನು ಬೆಳೆಸಿಕೊಂಡಾಗ ನೀವು ಉತ್ತಮ ವ್ಯಕ್ತಿತ್ವವನ್ನು ಮತ್ತು ಭವಿಷ್ಯವನ್ನು ಹೊಂದಲು ಸಾಧ್ಯ ಎಂದು ಗದಗ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಮಂಟಪದಲ್ಲಿ ನಡೆದ 58ನೇ ಶಿವಾನುಭವಗೋಷ್ಠಿಯಲ್ಲಿ ಅವರು ವಿದ್ಯಾರ್ಥಿ ಮತ್ತು ಸಾಹಿತ್ಯ ವಿಷಯ



ಕುರಿತು ವಿಶೇಷ ಉಪನ್ಯಾಸ ನೀಡಿದರು.

ಶಿವನೆಂದರೆ ಸತ್ಯ ಮತ್ತು ಸುಂದರ. ಈ ಸತ್ಯ ಮತ್ತು ಸುಂದರನಾಗಿರುವ ಶಿವನನ್ನು ಅರಿಯುವುದೇ ಶಿವಾನುಭವವಾಗಿದೆ. ಈ ಸಂದರ್ಭದಲ್ಲಿ ಈ ಶಿಕ್ಷಣ ಸಂಸ್ಥೆಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗಾಗಿ ಈ ವಿಷಯದ ಉಪನ್ಯಾಸ ಏರ್ಪಡಿಸಿರುವುದು ಸ್ತುತ್ಯವಾದದ್ದು. ಪಠ್ಯದೊಂದಿಗೆ ನಿಮ್ಮ ಬಿಡುವಿನ ವೇಳೆಯಲ್ಲಿ ನೀವು ಸಾಹಿತ್ಯದ ಪುಸ್ತಕಗಳನ್ನು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಿ. ಇದ-ರಿಂದ ನಿಮ್ಮಲ್ಲಿ ಮೊದಲು ಸಾಹಿತ್ಯದ ಅಭಿರುಚಿ ಬೆಳೆಯುತ್ತದೆ ನಂತರ ನೀವೂ ಒಬ್ಬ ಬರಹಗಾರರಾಗುತ್ತೀರಿ.

ನಿಮ್ಮ ಮನದಲ್ಲಿನ ಭಾವನೆಗಳನ್ನು ನೀವು ನಿಮಗೆ ಬೇಕಾದ ರೀತಿಯಲ್ಲಿ ವ್ಯಕ್ತಪಡಿಸಬಹುದು. ಕಥೆ, ಕವನ, ಚುಟುಕು, ಕಾದಂಬರಿ ಹೀಗೆ ಬೇರೆ ಬೇರೆ ಪ್ರಕಾರಗಳಲ್ಲಿ ನೀವು ಪರಿಣಿತಿಯನ್ನು ಗಳಿಸಿಕೊಳ್ಳಲು ಸಾಧ್ಯವಾಗುತ್ತದೆ. ಮೊದಲು ನೀವು ನಿಮ್ಮಲ್ಲಿನ ಆಸಕ್ತಿ ಕ್ಷೇತ್ರವನ್ನು ಆಯ್ದುಕೊಳ್ಳಿ. ಸಾಹಿತ್ಯವನ್ನು ಓದುವದರಿಂದ ನೀವೊಬ್ಬ ಒಳ್ಳೆಯ ವಾಗ್ಮಿಯೂ ಆಗಬಹುದು ಎಚಿದ ಅವರು, ಮನುಷ್ಯನನ್ನು ನಕಲಿನಿಂದ ದೂರ ಸರಿಸಿ ಅವನಲ್ಲಿ ಸ್ವಂತಿಕೆಯನ್ನು ಬೆಳೆಸಲು ಸಾಹಿತ್ಯ ಸಹಾಯ ಮಾಡುತ್ತದೆ ಎಂದರು.

ವ್ಯಕ್ತಿಯ ವ್ಯಕ್ತಿತ್ವ ಎಂದಿಗೂ ಅಂಕಗಳ ಮೇಲೆ ನಿರ್ಧಾರವಾಗುವುದಿಲ್ಲ. ಬದಲಾಗಿ ಅವನ ಸ್ವಂತಿಕೆ ಅವನಿಗೊಂದು ವ್ಯಕ್ತಿತ್ವವನ್ನು ಒದಗಿಸಿಕೊಡುತ್ತದೆ. ಹತ್ತರಲ್ಲಿ ಹನ್ನೊಂದಾಗಿ ನೀವು ಬೆಳೆಯುವ ಬದಲಾಗಿ ಸ್ವಂತಿಕೆಯನ್ನು ಬೆಳೆಸಿಕೊಂಡು, ವಿದ್ಯಾರ್ಥಿಯ ದಿಸೆಯಿಂದಲೇ ಸಾಹಿತ್ಯದ ಒಲವನ್ನು ಬೆಳೆಸಿಕೊಂಡು ಮುಂದೆ ಮಹೋನ್ನತ ವ್ಯಕ್ತಿಗಳಾಗಿರಿ ಎಂದು ವಿವೇಕಾನಂದಗೌಡ ಪಾಟೀಲ ಆಶಿಸಿದರು.

ನಿವೃತ್ತ ಶಿಕ್ಷಕ ಎಂ.ಎ. ಹಿರೇವಡೆಯರ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವೇದಿಕೆಯ ಮೇಲೆ ಸಂಸ್ಥೆಯ ಆಡಳಿತಾಧಿಕಾರಿ ಎನ್.ಆರ್. ಗೌಡರ, ಉಚಿತ ಪ್ರಸಾದ ನಿಲಯದ ಚೇರಮನ್ ಮಲ್ಲಿಕಾರ್ಜುನಪ್ಪ ಮೆಣಸಿಗಿ ಉಪಸ್ಥಿತರಿದ್ದರು. ಶಿಕ್ಷಕ ಆರ್. ಕೆ. ಬಾಗವಾನ ಸ್ವಾಗತಿಸಿದರು.ಡಾ. ಕಲ್ಲಯ್ಯ ಹಿರೇಮಠ ನಿರೂಪಿಸಿದರು. ಉಪನ್ಯಾಸಕ ಎಚ್.ಎಂ. ಹಾದಿಮನಿ ವಂದಿಸಿದರು.ಕಸಾಪ ಕೋಶಾಧ್ಯಕ್ಷ ಹೆದ್ದೂರಿ, ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ, ಉಪನ್ಯಾಸಕ ಎಫ್. ಎನ್. ಹುಡೇದ, ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ, ಶಿಕ್ಷಕ ಸುರೇಶ ಹಳ್ಳಿಕೇರಿ, ಜೆ.ಎ. ಪಾಟೀಲ ಇನ್ನೂ ಮುಂತಾದವರಿದ್ದರು.

## ನೂತನ ಪೌರಾಯುಕ್ತರಿಗೆ ಸನ್ಮಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರಾಗಿ ಅಧಿಕಾರ ವಹಿಸಿಕೊಂಡ ರಾಜಾರಾಮ ಶಿವಾಜಿ ಪವಾರವರಿಗೆ ಕರ್ನಾಟಕ ಮಾದಿಗ ಸಂಘರ್ಷ ಸಮಿತಿ ಗದಗ ಜಿಲ್ಲಾ ಘಟಕದ ಅಧ್ಯಕ್ಷ ರಾಘವೇಂದ್ರ ಪರಸಪ್ಪ ಪರಾಪೂರ ನೇತೃತ್ವದಲ್ಲಿ ಶಿವಶರಣ ಶ್ರೀ ಮಾದಾರ ಚನ್ನಯ್ಯನವರ ಭಾವಚಿತ್ರ ನೀಡಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕಳೆದ 3



ವರ್ಷಗಳಿಂದ ಪೂರ್ಣ ಪ್ರಮಾಣದ ಪೌರಾಯುಕ್ತರಿಲ್ಲದೆ ಪೌರಕಾರ್ಮಿಕರಿಗೆ ಮತ್ತು ಜನಸಾಮಾನ್ಯರಿಗೆ ತೆ-ಾಂದರೆಯಾಗಿತ್ತು. ಶ್ರೀಯುತರು ಪ್ರಾಮಾಣಿಕ ಅಧಿಕಾರಿಯಾಗಿದ್ದು, ತಮ್ಮ ಅಧಿಕಾರಾವಧಿಯಲ್ಲಿ ಪೌರಕಾರ್ಮಿಕರ ಮತ್ತು ನಗರಸಭೆಯ ಅಭಿವೃದ್ಧಿಯಾಗಲಿ ಎಂದು ಆಶಿಸಿದರು.

ಈ ಸಂದರ್ಭದಲ್ಲಿ ಮಾದಿಗ ಸಮಾಜದ ಹಿರಿಯರಾದ ಸತ್ಯಪ್ಪ ಕಡೇಮನಿ, ಪ್ರಮುಖರಾದ ಗಣೇಶ್ ಯಲ್ಲಪ್ಪ ಹುಬ್ಬಳ್ಳಿ, ಈಶ್ವರ್ ದೊಡ್ಡಮನಿ, ಮರಿಯಪ್ಪ ಪರಾಪೂರ, ಶ್ರೀಧರ್ ಜಕ್ಕಲಿ, ದೀಪಕ್ ಕಲ್ಮನಿ, ಪರಶುರಾಮ ಸಂಗಾಪೂರ, ಗಿರೀಶ್ ತಳಗೇರಿ ಹಾಗೂ ಶರಣಬಸಯ್ಯ ಹಿರೇಮಠ, ರಾಷ್ಟ್ರೀನ್ ಜೊಸೆಫ್ ಉಪಸ್ಥಿತರಿದ್ದರು.

## ಅಂಗಾಂಗ ದಾನಿಗಳಿಗೆ ಸನ್ಮಾನ

**■ ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡ ಮದಿಹಾಳದ ಡಿಪೋ ಸರ್ಕಲ್ ಹತ್ತಿರ ಸಿದ್ಧಾರೂಢ ಕಾಲೋನಿಯ ದಿ. ರೋಹಿತ ಜಗದೀಶ ಕುಂಬಾರ ಅವರು ಅಪಘಾತದಲ್ಲಿ ಮೆದುಳು ನಿಷ್ಕ್ರಿಯಗೊಂಡು ಮರಣ ಹೊಂದಿದ್ದು, ಅವರ ಕುಟುಂಬಸ್ಥರು ಅಂಗಾಂಗ ದಾನ ಮಾಡಲು ಮುಂದೆ ಬಂದು, ಅಗಸ್ಟ್ 7, 2024ರಂದು ಧಾರವಾಡ ಎಸ್.ಡಿ.ಎಂ ಆಸ್ಪತ್ರೆಯಲ್ಲಿ ಅಂಗಾಂಗ ದಾನ ಮಾಡಿದ್ದಾರೆ.

ಕುಟುಂಬಸ್ಥರ ಮಾನವೀತೆಯ ಕಾರ್ಯವನ್ನು ಶ್ಲಾಘಿಸಿ, ಧಾರವಾಡ ಜಿಲ್ಲಾಡಳಿತದ ವತಿಯಿಂದ ಗಣಾರಾಜ್ಯೋತ್ಸವದ ದಿನಾಚರಣೆಯ ಸಂದರ್ಭದಲ್ಲಿ ಆರ್.ಎನ್. ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿದ ಜಿಲ್ಲಾಮಟ್ಟದ ಕಾರ್ಯಕ್ರಮದಲ್ಲಿ ಕುಟುಂಬಸ್ಥರನ್ನು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಸನ್ಮಾನಿಸಿ ಗೌರವಿಸಿದರು.



## ಮಹಿಳೆಯರು ಸ್ವಾವಲಂಬಿ ಜೀವನ ನಡೆಸಬೇಕು

**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗಂಗಾಪುರ ಪೇಟೆ ಓಣಿಯಲ್ಲಿ ಶ್ರೀ ರಾಜರಾಜೇಶ್ವರಿ ಮಹಿಳಾ ಮಂಡಲದ ವತಿಯಿಂದ ಮಕರ ಸಂಕ್ರಾಂತಿಯ ಹಬ್ಬದ ನಿಮಿತ್ತ ಉಡಿ ತುಂಬವ ಕಾರ್ಯಕ್ರಮವನ್ನು ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಎಸ್‌ಎಸ್‌ಕೆ ಸಮಾಜದ ಮಹಿಳಾ ಮಂಡಳದ ಅಧ್ಯಕ್ಷರಾದ ಉಮಾ ಬೇವನಕಟ್ಟಿ ಹಾಗೂ ನಿವೃತ್ತ ಪ್ರಾಂಶುಪಾಲ ಚಂದ್ರಭಾಗ ಕಾಟಿಗರ್ ಮಾತನಾಡಿ, ಮಹಿಳೆಯರು ಸ್ವಾವಲಂಬಿ ಜೀವನವನ್ನು ನಡೆಸಬೇಕು. ಯುವತಿಯರು ಶಿಕ್ಷಣದಲ್ಲಿ ಮುಂದೆ ಬರಬೇಕು. ಕೇವಲ ಶಿಕ್ಷಣ, ಸಾಧನೆಯೆಡೆಗೆ ಗುರಿ ಇಡಬೇಕು. ಕುಟುಂಬ ಹಾಗೂ ಸಮಾಜ ಮೆಚ್ಚುವಂತಹ ಶಿಕ್ಷಣ ಕಲಿತು ಇನ್ನೊಬ್ಬರಿಗೆ



ಮಾದರಿಯಾಗುವಂತೆ ಬದುಕಬೇಕು ಎಂದು ಹೇಳಿದರು.

ಶ್ರೀ ರಾಜರಾಜೇಶ್ವರಿ ಮಹಿಳಾ ಮಂಡಳದ ಗೌರವ ಅಧ್ಯಕ್ಷೆ ಸರೋಜಾಬಾಯಿ ಟೀಕಂದಾರ, ರೇಣುಕಾಬಾಯಿ ಕಬಾಡಿ ಮಾತನಾಡಿ, ಮಹಿಳೆಯರು ಕೇವಲ ಮನೆಗೆ ಮಾತ್ರ ಸೀಮಿತವಾಗದೆ, ಹೊರಗೆ ಬಂದು ಸಾಮಾಜಿಕ ಸೇವೆಯಲ್ಲಿ ಪಾಲ್ಗೊಳ್ಳಬೇಕು ಎಂದರು.

ಶ್ರೀ ರಾಜರಾಜೇಶ್ವರಿ ಮಹಿಳಾ ಮಂಡಲದ ಗೌರವ ಕಾರ್ಯದರ್ಶಿ ಶ್ರೀದೇವಿ ಕಬಾಡಿ ಸ್ವಾಗತಿಸಿ ನಿರೂಪಿಸಿದರು. ಕಾರ್ಯದರ್ಶಿ ಗಂಗಾ ಸಿದ್ದಲಿಂಗ, ಖಜಾಂಚಿ ಅಕ್ಷತಾ ಪವಾರ್ ಅತಿಥಿಗಳನ್ನು ಪರಿಚಯಿಸಿದರು.

ಈ ಸಂದರ್ಭದಲ್ಲಿ ರಾಜರಾಜೇಶ್ವರಿ ಮಹಿಳಾ ಮಂಡಳದ ಸದಸ್ಯರಾದ ವೀಣಾ ಬದಿ, ಕಸ್ತೂರಿ ಕಬಾಡಿ, ವಿಜಯ ಕಬಾಡಿ, ಗೋದಾವರಿ ಕಬಾಡಿ, ಗಂಗಾ ಪವಾರ, ತುಳಸಾ ಹಬೀಬ, ಲಕ್ಷ್ಮೀ ಕಬಾಡಿ ಮುಂತಾದವರು ಉಪಸ್ಥಿತರಿದ್ದರು.

## ಸಂವಿಧಾನವನ್ನು ಪ್ರತಿಯೊಬ್ಬರೂ ಗೌರವಿಸಬೇಕು

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಸರಕಾರಿ ನಿವೃತ್ತ ನೌಕರರ ಸಂಘ, ನಿವೃತ ನೌಕರರ ಪತ್ತಿನ ಸಹಕಾರ ಸಂಘ ಮತ್ತು ಜಾಗೃತ ನಾಗರಿಕರ ವೇದಿಕೆ ಬಸವೇಶ್ವರ ನಗರ ಗದಗ ಇವುಗಳ ಸಂಯುಕ್ತ ಆಶ್ರಯದಲ್ಲಿ 76ನೇ ಗಣರಾಜೋತ್ಸವವನ್ನು ಆಚರಿಸಲಾಯಿತು.

ಧ್ವಜಾರೋಹಣವನ್ನು ನಿವೃತ್ತ ನೌಕರರ ಸಂಘದ ಅಧ್ಯಕ್ಷ ಪ್ರೊ. ಕೆ.ಎಚ್. ಬೇಲೂರ ನೆರವೇರಿಸಿ ಮಾತನಾಡಿ, ಭಾರತದ ಸಂವಿಧಾನ ದೇಶದ ಪ್ರತಿಯೊಬ್ಬ ನಾಗರಿಕನಿಗೆ ಸರಿಸಮಾನವಾಗಿ ಬಾಳುವ ಹಕ್ಕುಗಳನ್ನು ನೀಡಿದೆ. ದೇಶದ ಪ್ರತಿಯೊಬ್ಬ ನಾಗರೀಕನೂ ಕಾನೂನಿನ ದೃಷ್ಟಿಯಲ್ಲಿ ಸರ್ವಸಮಾನ ಎಂಬುದನ್ನು ಬಿಂಬಿಸುತ್ತದೆ. ನಮ್ಮ ಸಂವಿದಾನ ನಿಜಕ್ಕೂ



ಅದ್ಭುತವಾಗಿದೆ. ದೇಶದ ಸ್ವಾತಂತ್ರ್ಯಕ್ಕಾಗಿ ಶ್ರಮಿಸಿದ ಮತ್ತು ಸ್ವಾತಂತ್ರ್ಯಾ ನಂತರ ದೇಶದ ಅಭಿವೃದ್ಧಿಗಾಗಿ ಶ್ರಮಿಸಿದ ಗಣ್ಯರನ್ನು ಸ್ಮರಿಸೋಣ ಎಂದರು.

ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಬಿ.ಎಂ. ಬಿಳೆಯಲಿ ಮಾತನಾಡಿ, ಸ್ವತಂತ್ರ ಭಾರತದಲ್ಲಿ ಪ್ರತಿಯೊಬ್ಬ ನಾಗರಿಕನ ಹಕ್ಕುಗಳನ್ನು ಮತ್ತು ಕರ್ತವ್ಯಗಳನ್ನು ನಮ್ಮ ಸಂವಿಧಾನ ತಿಳಿಸಿದೆ. ನಮಗೆ ಸಂವಿದಾನವು ಆರ್ಥಿಕ, ಸಾಮಾಜೀಕ, ಧಾರ್ಮಿಕ ಆಚರಣೆಗಳನ್ನು ಮಾಡುವ ಹಕ್ಕನ್ನು ನೀಡಿದೆ ಎಂದರು.

ಸಂಘದ ಸದಸ್ಯರಾದ ಪ್ರೊ. ಆರ್.ಎಚ್ ಮೇಹರವಾಡೆ, ಪ್ರೋಬಸ್ ಕ್ಲಬ್‌ನ ಅಧ್ಯಕ್ಷ ಕೆ.ಎಸ್. ಗುಗ್ಗರಿ ಮುಂತಾದವರು ಸಂದರ್ಭೋಚಿತವಾಗಿ ಮಾತನಾಡಿದರು. ವೇದಿಕೆಯಲ್ಲಿ ನಿವೃತ್ತ ನೌಕರರ ಸಂಘದ ಉಪಾಧ್ಯಕ್ಷ ಜಿ.ವ್ಹಿ. ಮಳಲಿ, ಜಾಗೃತ ನಾಗರಿಕರ ವೇದಿಕೆಯ ಕಾರ್ಯದರ್ಶಿ ಎಂ.ಎಫ್ ಡೋಣಿ, ನಿರ್ದೇಶಕರಾದ ಎಂ.ಬಿ. ಹಳ್ಳಿ, ವಾಯ್.ಕೆ. ಪಿಡಗಣ್ಣವರ, ಆರ್.ಟಿ. ನಾರಾಯಣಪೂರ, ಎಸ್.ಎಫ್. ಕಂಬಿಮಠ, ಆರ್. ಎಸ್. ಪೂಜಾರ, ವ್ಹಿ.ಆರ್. ಕುಲ್ಕರ್ಣಿ ಮುಂತಾದವರಿದ್ದರು.

ಪ್ರಧಾನ ಕಾರ್ಯದರ್ಶಿ ಪ್ರೊ. ಎಂ.ಸಿ. ವಗ್ಗಿ ಸ್ವಾಗತಿಸಿದರು, ಕೊನೆಯಲ್ಲಿ ಆರ್.ಟಿ. ನಾರಾಯಣಪೂರ ವಂದಿಸಿದರು.

## ಬಿ.ಜೆ.ಪಿ ನೂತನ ಮಂಡಲಾಧ್ಯಕ್ಷರಿಗೆ ಸನ್ಮಾನ

**■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಲಕ್ಕುಂಡಿ ಬಿ.ಜೆ.ಪಿ ಮಂಡಲದ ನೂತನ ಅಧ್ಯಕ್ಷರಾಗಿ ನೇಮಕವಾಗಿರುವ ಮಹೇಶಕುಮಾರ ಮುಸ್ಕಿನಭಾವಿ ಅವರನ್ನು ಬಿ.ಜೆ.ಪಿ ಕಾರ್ಯಕರ್ತರು ಸನ್ಮಾನಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಮಹೇಶ ಮುಸ್ಕಿನಭಾವಿ, ಲಕ್ಕುಂಡಿ ಬಿ.ಜೆ.ಪಿ ಮಂಡಲದಲ್ಲಿ



ಪಕ್ಷವನ್ನು ಸಂಘಟಿಸಲು ಎಲ್ಲರೂ ಸಹಕಾರ ನೀಡಬೇಕು ಎಂದರು. ಶೇಖಯ್ಯ ನಡುವಿನಮಠ, ಮಹಾದೇವಪ್ಪ ಬಾಳಿತೋಟ, ಅಪ್ಪಣ್ಣ ಕಮತರ, ಶಿವು ಭಜಂತ್ರಿ, ಮರಿಯಪ್ಪ ವಡ್ಡರ, ಈರಣ್ಣ ಕಮತರ, ಮಾಲಿಂಗಪ್ಪ ಮಂಗಳೂರು, ಕೊಟ್ರೇಶ ನಾಗಾವಿಮಠ, ಬುದ್ದಪ್ಪ ಹಡಗಲಿ, ಶಿವಪ್ಪ ಅಸುಂಡಿ, ಬಸವರಾಜ ಗದಗಿನ, ಲಕ್ಷ್ಮಿ ಕುಂಬಾರ, ಈರಪ್ಪ ರವದಿ ಅಶೋಕ ಕಮತರ ಇತರರು ಹಾಜರಿದ್ದರು.

## ಯೋಗೋತ್ಸವ ಸ್ಪರ್ಧೆಯಲ್ಲಿ ಕೊಪ್ಪಳದ ಯೋಗಪಟುಗಳ ಸಾಧನೆ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯಧಾನಿಯಲ್ಲಿ ಜ.24, 25, 26 ರ ಮೂರು ದಿನಗಳ ಕಾಲ ಶಿವ ಜ್ಯೋತಿ ಯೋಗ ಕೇಂದ್ರ ಏರ್ಪಡಿಸಿದ್ದ ಯೋಗೋತ್ಸವ ಕಾರ್ಯಕ್ರಮದಲ್ಲಿ ಕೊಪ್ಪಳದ 7 ಯೋಗ ಪಟುಗಳು ಯೋಗ ಪ್ರತಿಭಾ ಪುರಸ್ಕಾರ ಪಡೆದುಕೊಂಡಿದ್ದಾರೆ.

ಅಗಸ್ತ್ಯ ಅರಕೇರಿ, ಅಖಿಲೇಶ್ ಯಾದವ್, ಅರ್ಜುನ್ ಯಾದವ್, ಪ್ರಿಯಾಂಕಾ, ವೈಷ್ಣವಿ, ಸಂಜನಾ



ಕ್ವಾಟಿಮಟ್, ಖುಷಿ ಎಸ್ ಜಿ, ಯೋಗ ಪ್ರತಿಭಾ ಅವಾರ್ಡ್ 2025 ಪಡೆದ ಎಲ್ಲಾ ಯೋಗ ಪಟುಗಳಿಗೆ ತರಬೇತಿದಾರರಾದ ತಿರುಮಲೇಶ್ ಯಾದವ್ ಶುಭ ಕೋರಿದ್ದಾರೆ.

ಇವರ ಸಾಧನೆ ಇನ್ನೂ ಉನ್ನತ ಮಟ್ಟಕ್ಕೆ ಬೆಳೆದು ಅಂತಾರಾಷ್ಟ್ರೀಯ ಯೋಗ ಪಟುಗಳಾಗಿ ಹೊರಹೊಮ್ಮಲಿ ಎಂದು ಕ್ರೀಡಾಪಟುಗಳು ಶುಭ ಹಾರೈಸಿದ್ದಾರೆ.

## ನಾಳೆ ಮಡಿವಾಳ ಮಾಚಿದೇವ ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಶ್ರೀ ಮಡಿವಾಳ ಮಾಚಿದೇವ ಜಯಂತಿಯನ್ನು ಫೆಬ್ರವರಿ 1 ರಂದು ಮಧ್ಯಾಹ್ನ 3 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ್ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ ಆಗಮಿಸುವರು.

ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಧ್ಯಾಪಕರಾದ ಪ್ರೊ. ಸಿದ್ಧಲಿಂಗೇಶ ಸಜ್ಜನಶೆಟ್ಟರ ಅವರು ಶ್ರೀ ಮಡಿವಾಳ ಮಾಚಿದೇವರ ಜೀವನ ಮತ್ತು ಸಂದೇಶ ಕುರಿತು ಉಪನ್ಯಾಸ ನೀಡುವರು. ವೀರೇಶ್ವರ ಪುಣ್ಯಾಶ್ರಮದ ಕು.ರಾಮು ಸುಡುಗಾಡಸಿದ್ಧ ಸುಗಮ ಸಂಗೀತ ಪ್ರಸ್ತುತಪಡಿಸುವರು.

ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಸ್ವಾಗತ ಕೋರಿದ್ದಾರೆ.

### ಇರುವ ರಸ್ತೆಯನ್ನೂ ಕಿತ್ತು, ಹೊಸ ರಸ್ತೆಯನ್ನೂ ನಿರ್ಮಿಸದ ಪುರಸಭೆ

# ನಗರೋತ್ಥಾನ ಕಾಮಗಾರಿಯ ಅವಾಂತರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ವಾರ್ಡ್ ನಂ. 19ರಲ್ಲಿನ ರಸ್ತೆಯೊಂದನ್ನು ಕಳೆದ 2 ತಿಂಗಳ ಹಿಂದೆ ಕಿತ್ತು ಹಾಕಿದ್ದು, ಚೆನ್ನಾಗಿಯೇ ಇದ್ದ ಸಿ.ಸಿ ರಸ್ತೆಯನ್ನು ತೆಗೆದು ಮುಂದಿನ ಕಾಮಗಾರಿಯನ್ನು ಅರ್ಧಕ್ಕೇ ನಿಲ್ಲಿಸಿರುವದರಿಂದ ಅಲ್ಲಿನ ನಿವಾಸಿಗಳು ರಸ್ತೆಯಲ್ಲಿ ಓಡಾಡಲು ಪರದಾಡುವಂತಾಗಿದೆ. ಈ ಹಿನ್ನೆಲೆಯಲ್ಲಿ ಗುರುವಾರ ವಾರ್ಡ್‌ನ ಸಾರ್ವಜನಿಕರು ಪ್ರತಿಭಟನೆ ನಡೆಸಿ ರಸ್ತೆಯ ಸ್ಥಿತಿಯ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದರು.

ಡಾಂಬರ್ ರಸ್ತೆ ಮಾಡುವ ಸಲುವಾಗಿ ಗಟ್ಟಿಮುಟ್ಟಾದ ಸಿಸಿ ರಸ್ತೆ ಕಿತ್ತು ಹಾಕಿ ಎರಡು ತಿಂಗಳಾದರೂ ಡಾಂಬರ್ ರಸ್ತೆ ಕಾಮಗಾರಿ ಆರಂಭವಾಗದೆ ಸಾರ್ವಜನಿಕರು ಪರದಾಡುವಂತಾಗಿದೆ. ಪಟ್ಟಣದ 19ನೇ ವಾರ್ಡಿನಲ್ಲಿ ಈಶ್ವರ ದೇವಸ್ಥಾನದ ಬಳಿ ನಗರೋತ್ಥಾನ ಕಾಮಗಾರಿಯ ನೆಪದಲ್ಲಿ ಗಟ್ಟಿಯಾದ ಸಿಸಿ ರಸ್ತೆ ತೆಗೆದು ತೆಗ್ಗು ತೆಗೆಯಲಾಗಿದ್ದು, ಸಂಚಾರಕ್ಕೆ ಸಂಚಕಾರವಾಗಿದೆ.

ಈ ವಾರ್ಡ್‌ನಲ್ಲಿ ನಗರೋತ್ಥಾನ ಕಾಮಗಾರಿ ಪ್ರಾರಂಭಿಸುವ ಸಂದರ್ಭದಲ್ಲಿ ಪುರಸಭೆಯ ಸದಸ್ಯರು ರಸ್ತೆ ಅಗೆಯುವ ವೇಳೆ ಶೀಘ್ರದಲ್ಲಿ ಗುಣಮಟ್ಟದ ಡಾಂಬರ್ ರಸ್ತೆ ನಿರ್ಮಿಸಿ ಕೊಡುವುದಾಗಿ ಭರವಸೆ



ನೀಡಿದ್ದರು. ಆದರೆ ಕಳೆದ ಎರಡು ತಿಂಗಳಿಂದ ಪುರಸಭೆ ಸದಸ್ಯರು ಇತ್ತ ಕಡೆ ಮುಖ ಹಾಕಿಲ್ಲ ಎಂದು ಬಸಾಪುರ ಓಣಿಯ ಬಸವ್ವ ನಿಂಗಪ್ಪ ಬಿಜಾಪೂರ ಆಕ್ರೋಶ ವ್ಯಕ್ತಪಡಿಸಿದರು.

ಪ್ರೇಮಾ ಬಳಗಾನೂರ ಮತ್ತು ನಿಂಗಪ್ಪ ರಾಮಗೇರಿ ಮಾತನಾಡಿ, ಕಳೆದ ಎರಡು ತಿಂಗಳಿಂದ ಈ ವಾರ್ಡಿನ ಜನರು ನರಕಯಾತನೆ ಅನುಭವಿಸುತ್ತಿದ್ದಾರೆ. ಎರಡು ಮೂರು ಬಾರಿ ಪುರಸಭೆಗೆ ಈ ಕುರಿತು ಮನವಿ ಸಲ್ಲಿಸಿದ್ದರೂ ಯಾರೂ ಕ್ಯಾರೇ ಎನ್ನುತ್ತಿಲ್ಲ. ಇನ್ನೊಂದು ವಾರದಲ್ಲಿ

> ಪಟ್ಟಣದ 19ನೇ ವಾರ್ಡಿನಲ್ಲಿ ನಗರೋತ್ಥಾನ ಯೋಜನೆ ಅಡಿಯಲ್ಲಿ ಡಾಂಬರ್ ರಸ್ತೆ ನಿರ್ಮಾಣಕ್ಕೆ ಈ ಹಿಂದೆ ಇದ್ದ ರಸ್ತೆ ತೆಗೆದು ಹಾಕಲಾಗಿದೆ. ಸಾರ್ವಜನಿಕರಿಗೆ ಆಗಿರುವ ತೊಂದರೆ ಕುರಿತು ಮಾಹಿತಿ ಬಂದಿದೆ. ನಗರೋತ್ಥಾನ ಕಾಮಗಾರಿಯ ಸಂಪೂರ್ಣ ಜವಾಬ್ದಾರಿ ಜಿಲ್ಲಾಧಿಕಾರಿಗಳ ಅಧೀನದಲ್ಲಿ ಇರುತ್ತದೆ. ನಮ್ಮದು ಕೇವಲ ಉಸ್ತುವಾರಿ ಮಾಡುವ ಕಾರ್ಯವಾಗಿದೆ. ಗುತ್ತಿಗೆದಾರರಿಗೆ ನೋಟಿಸ್ ನೀಡಲಾಗಿದ್ದು, ಆದಷ್ಟು ಶೀಘ್ರ ಕಾಮಗಾರಿ ಪೂರ್ಣಗೊಳಿಸುವ ಕಾರ್ಯ ಮಾಡಲಾಗುವದು.
>
> **– ಮಹೇಶ ಹಡಪದ.**
> **ಪುರಸಭೆ ಮುಖ್ಯಾಧಿಕಾರಿ.**

ರಸ್ತೆ ಕಾಮಗಾರಿ ಆರಂಭಿಸದಿದ್ದಲ್ಲಿ ಪುರಸಭೆಗೆ ಬೀಗ ಜಡಿದು ಪ್ರತಿಭಟನೆ ಮಾಡಲಾಗುವುದು ಎಂದು ಎಚ್ಚರಿಸಿದರು.

ಈ ವೇಳೆ ಶಾಂತವ್ವ ಬಸಾಪೂರ, ನೀಲವ್ವ ಗೋಡಿ, ಕೆಂಚವ್ವ ಬಸಾಪೂರ, ಲಕ್ಷ್ಮವ್ವ ಬಸಾಪೂರ, ಷಣ್ಮುಖ ಬಡಿಗೇರ, ನಿಂಗಪ್ಪ ಗೋಡಿ ಮೊದಲಾದವರು ಇದ್ದರು.

## ಕರ್ನಾಟಕ ರಾಜ್ಯ ನದಾಫ್ ಪಿಂಜಾರ್ ಸಂಘದ ಶಹರ ಘಟಕದಿಂದ 76ನೇ ಗಣರಾಜ್ಯೋತ್ಸವ ಧ್ವಜಾರೋಹಣ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕರ್ನಾಟಕ ರಾಜ್ಯ ನದಾಫ್ ಪಿಂಜಾರ್ ಸಂಘದ ಶಹರ ಘಟಕದ ಸರ್ವ ಸದಸ್ಯರಿಂದ ಸಂತ ಶಿಶುನಾಳ ಶರೀಫ ಶಾಲಾ ಮೈದಾನದಲ್ಲಿ ಗಣರಾಜ್ಯೋತ್ಸವ ಧ್ವಜಾರೋಹಣ ನೆರವೇರಿಸಲಾಯಿತು.

ಶಹರ ಘಟಕದ ಅಧ್ಯಕ್ಷ ಮೈನು ಬಿಜಾಪುರ್ ಧ್ವಜಾರೋಹಣ ನೆರವೇರಿಸಿದರು. ಗದಗ ಜಿಲ್ಲಾ ಕಾರ್ಯದರ್ಶಿ ಎಂ.ಬಿ. ನದಾಫ್ (ವಕೀಲರು) ಗಣರಾಜ್ಯೋತ್ಸವದ ಕುರಿತು ಪ್ರಾಸ್ತಾವಿಕ ಮಾತನಾಡಿದರು. ಶಹರ ಘಟಕದ ಕಾರ್ಯದರ್ಶಿಯಾದ ಜಾಕೀರ ಬಾಗಲಕೋಟ ಸ್ವಾಗತಿಸಿದರು.



ನದಾಫ್ ಪಿಂಜಾರ್ ಸಮಾಜದ ಆಸಿಫ್‌ಅಲಿ ರಂಜಾನ್‌ಸಾಬ್, ಫೈಜಲ್ ನದಾಫ್, ನವೀದ್‌ಸಿದ್ದಾಪುರ, ಡಾಕ್ಟರ್ ನದಾಫ್, ಶಹರ ಘಟಕದ ಖಜಾಂಚಿಯಾದ ಮೋದಿನಸಾಬ್ ಅಣ್ಣಿಗೇರಿ, ನಾಶೀರ್ ಚಿಕೇನಕೊಪ್ಪ ಮುಂತಾದವರಿದ್ದರು.

ಈ ಕಾರ್ಯಕ್ರಮದಲ್ಲಿ ವಿಶೇಷ ಅತಿಥಿಯಾಗಿ ಯುವ ಕರ್ನಾಟಕ ಭೀಮಸೇನೆ ಯುವಶಕ್ತಿ ಸಂಘ ಗದಗ ಜಿಲ್ಲಾ ಅಧ್ಯಕ್ಷ ರಾಮು ಬಾಗಲಕೋಟ ಪಾಲ್ಗೊಂಡಿದ್ದರು. ಭೀಮ ಸೇನೆ ಸಂಘಟನೆ ಶಹರ ಘಟಕದ ಅಧ್ಯಕ್ಷ ಶಬ್ಬೀರ್ ತಹಸೀಲ್ದಾರ್, ಜಿಲ್ಲಾ ಉಪಾಧ್ಯಕ್ಷ ಖಾಜಾಸಾಬ್ ಗಬ್ಬೂರ್, ಸದಸ್ಯರಾದ ನಜೀರ್‌ಅಹ್ಮದ್ ಬಳ್ಳಾರಿ, ಖಾದರ್ ಭಾಷಾ ನವಲಗುಂದ್, ಎಂಕಪ್ಪ ತಾಳದವರ್, ಶಬುದ್ದೀನ್ ಧಾರವಾಡ, ಮಹಮ್ಮದ್‌ರಫೀಕ್ ಹಣಗಿ, ಮಹಮ್ಮದರಫೀಕ ಹಣಗಿ, ಮಹಮ್ಮದರಫೀಕ್ ಕರೆಕಾಯಿ, ಸಾದಿಕ್ ಧಾರವಾಡ್ ಭಾಗವಹಿಸಿದ್ದರು. ಬಾಬು (ಹುಸೇನಸಾಬ) ನದಾಫ್ ವಂದಿಸಿದರು.

## ಹೆಣ್ಣು ಮಕ್ಕಳ ದಿನಾಚರಣೆ ನಿಮಿತ್ತ ಆರೋಗ್ಯ ಶಿಬಿರ



■ವಿಜಯಸಾಕ್ಷಿ ಸುದ್ದಿ, ಗದಗ

ನೆಹರು ಯುವ ಕೇಂದ್ರ ಗದಗ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಕಲ್ಯಾಣ ಸಮಿತಿ, ಬಾಲ ನ್ಯಾಯ ಮಂಡಳಿ ಮತ್ತು ಮಾ ವಜ್ರೇಶ್ವರಿ ಫೌಂಡೇಶನ್ ಹಾಗೂ ಆದಿಶಕ್ತಿ ಯುವ ಮಂಡಳ ಇವರ ಸಂಯುಕ್ತ ಆಶ್ರಯದಲ್ಲಿ ಗದುಗಿನ ಬಾಲಕಿಯರ ಬಾಲ ಮಂದಿರದಲ್ಲಿ ಹೆಣ್ಣು ಮಕ್ಕಳ ದಿನಾಚಣೆಯ ಅಂಗವಾಗಿ ಆರೋಗ್ಯ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಫಿಕಾ ಹಳ್ಳೂರ ಮಕ್ಕಳಿಗೆ ಆಹಾರವನ್ನು ಯಾವ ರೀತಿ ಸೇವಿಸಬೇಕು ಎಂದು ತಿಳಿಸಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಸ್ತ್ರೀ ರೋಗ ತಜ್ಞರು, ಡಿಜಿಎಂ ಆಯುರ್ವೇದಿಕ್ ಕಾಲೇಜಿನ ಉಪನ್ಯಾಸಕರು ಮತ್ತು ಮಾ ವಜ್ರೇಶ್ವರಿ ಫೌಂಡೇಶನ್ ಅಧ್ಯಕ್ಷರಾದ ಸುವರ್ಣ ನಿಡಗುಂದಿ ಮಕ್ಕಳ ವೈಯಕ್ತಿಕ ಆರೋಗ್ಯದ ಬಗ್ಗೆ ಮತ್ತು ಯೋಗದ ಬಗ್ಗೆ ಮಕ್ಕಳಿಗೆ ಮಾಹಿತಿ ನೀಡಿದರು.

ವಿಜಯಲಕ್ಷ್ಮೀ ಬಾಗೇವಾಡಿ ನಿರೂಪಿಸಿದರು. ಶಶಿಕಲಾ ವಂದಿಸಿದರು. ಕಾರ್ಯಕ್ರಮದಲ್ಲಿ ನೆಹರು ಯುವ ಕೇಂದ್ರದ ಜಿಲ್ಲಾ ಯುವ ಅಧಿಕಾರಿಗಳಾದ ಎನ್. ರಂಜಿನಿ, ಜಯಶ್ರೀ ಕವಲೂರು, ದೇವಪ್ಪ ಇರಗರ್, ಬಸವರಾಜ್ ಸಂಶಿ, ಗಿರಿಜಾ ದೊಡ್ಡಮನಿ, ಗೀತಾ ಕಂಬಳ, ವಿಜಯಲಕ್ಷ್ಮೀ ವಾಲಿ, ರವಿ ಹೊಂಬಾಳಿ ಮುಂತಾದವರಿದ್ದರು.

## ನವಗ್ರಹ ಮಂದಿರಕ್ಕೆ ಭೂಮಿ ಪೂಜೆ

■ವಿಜಯಸಾಕ್ಷಿ ಸುದ್ದಿ, ರೋಣ

ಗ್ರಾಮ ಹಾಗೂ ನಾಗರಿಕ ಸಮುದಾಯದ ರಕ್ಷಣೆಗೆ ನವಗ್ರಹಗಳ ಪೂಜಾ ಕಾರ್ಯ ನಿರಂತರ ನಡೆಯಬೇಕು ಎಂದು ಪತ್ರಕರ್ತ ಮೆಹೆಬೂಬ ಮೋತೆಖಾನ್ ಹೇಳಿದರು.

ಅವರು ಗುರುವಾರ ಮಾರನಬಸರಿ ಗ್ರಾಮದ ಮಾರುತೇಶ್ವರ ದೇವಸ್ಥಾನದ ಬಳಿ ನವಗ್ರಹ ಪೂಜಾ ಕಟ್ಟಡಕ್ಕೆ ಭೂಮಿ ಪೂಜೆಯನ್ನು ನೆರವೇರಿಸಿ ಮಾತನಾಡಿದರು.

ಮಾರನಬಸರಿ ಗ್ರಾಮ ಸೌಹಾರ್ದತೆಯ ಸಂಕೇತವಾಗಿದೆ. ಈ ಗ್ರಾಮದಲ್ಲಿ ಭಕ್ತಿ ಇಮ್ಮಡಿಗೊಳಿಸುವ ಧಾರ್ಮಿಕ ಕಾರ್ಯಗಳು ನಡೆಯಬೇಕು. ನಮ್ಮ ಗ್ರಾಮದಲ್ಲಿ ನವಗ್ರಹಗಳ ಪೂಜಾ ಸ್ಥಾನ ಇಲ್ಲಿವರೆಗೆ ಇದ್ದಿಲ್ಲ. ಆದರೆ ದೇವಸ್ಥಾನದ ಅರ್ಚಕರು ನವಗ್ರಹ ಮಂದಿರ ನಿರ್ಮಾಣಕ್ಕೆ ಮುಂದಾಗಿರುವುದು ಒಳ್ಳೆಯ ಬೆಳವಣಿಗೆಯಾಗಿದೆ ಎಂದರು.

ಮುಖಂಡ ಶರಣಪ್ಪಜ್ಜ ಕುರಿ ಮಾತನಾಡಿ, ಮಾರನಬಸರಿ ಗ್ರಾಮದ ಮಾರುತೇಶ್ವರ ದೇವಸ್ಥಾನ ಐತಿಹಾಸಿಕ ಧಾರ್ಮಿಕ ಕೇಂದ್ರವಾಗಿದೆ. ಈ ದೇವಸ್ಥಾನಕ್ಕೆ ಜಾತಿ-ಧರ್ಮಗಳನ್ನು ಎಣಿಸದೆ ಎಲ್ಲರೂ ಆಗಮಿಸಿ ಮಾರುತೇಶ್ವರನ ಆಶೀರ್ವಾದಕ್ಕೆ ಪಾತ್ರರಾಗುತ್ತಾರೆ. ಇಂತಹ ಪುಣ್ಯದ ನೆಲದಲ್ಲಿ ನವಗ್ರಹ ದೇವಸ್ಥಾನ ನಿರ್ಮಾಣದಿಂದ ನಮ್ಮ ಗ್ರಾಮಕ್ಕೆ ಒಳಿತಾಗಲಿದೆ ಎಂದರು.

ನಿವೃತ್ತ ಶಿಕ್ಷಕ ಸತ್ಯಪ್ಪ ಪೂಜಾರ ಮಾತನಾಡಿ,



ಗ್ರಾಮದ ಸರ್ವ ಜನರು ಎಲ್ಲ ಹಬ್ಬಗಳನ್ನು, ಜಾತ್ರೆಗಳನ್ನು ಆಚರಣೆ ಮಾಡುತ್ತಾ ಬಂದಿದ್ದಾರೆ. ಅಲ್ಲದೆ ನವಗ್ರಹ ದೇವಸ್ಥಾನ ನಿರ್ಮಾಣ ಕಾರ್ಯದಲ್ಲಿಯೂ ಗ್ರಾಮದ ಸರ್ವ ಜನಾಂಗದವರು ಪಾಲ್ಗೊಂಡು ತಮ್ಮ ಭಕ್ತಿಯನ್ನು ಮೆರದಿರುವುದು ಗ್ರಾಮದ ಏಕತೆಗೆ ಸಾಕ್ಷಿಯಾಗಿದೆ ಎಂದರು.

ವೇ.ಮೂ.ವಿಶ್ವನಾಥ ಭಟ್ಟ ವೈದ್ಯ ಪೂಜಾ ಕಾರ್ಯವನ್ನು ನೆರವೇರಿಸಿದರು. ಜಿ.ಪಂ ಮಾಜಿ ಉಪಾಧ್ಯಕ್ಷ ಎಸ್.ಎಚ್. ಹಾದಿಮನಿ, ಗ್ರಾ.ಪಂ ಸದಸ್ಯ ಈರಪ್ಪ ನಿಡಗುಂದಿ, ಶರಣಪ್ಪ ಸಂಗಟಿ, ಬೂದೇಶ ವಣಗೇರಿ, ಪರಸಪ್ಪ ತಳವಾರ, ನಿವೃತ್ತ ಸೈನಿಕ ಹನ್ಮಂತಪ್ಪ ಪೂಜಾರ, ಅಶೋಕ ಮ್ಯಾಗೇರಿ, ಚಂದ್ರಯ್ಯಜ್ಜ ವಸ್ತ್ರದ, ಖಾದಿರಸಾಬ ಕಳಕಾಪೂರ, ಶಿವಲಿಂಗಪ್ಪ ದಿಂಡೂರ, ಶಂಕರಗೌಡ ಮಾಲಿಪಾಟೀಲ, ಅಬ್ದುಲ್ ಹುಡೇದ ಮುಂತಾದವರಿದ್ದರು.

## ಸಮಯ ಪ್ರಜ್ಞೆಯೊಂದಿಗೆ ಜ್ಞಾನಾರ್ಜನೆಗೆ ಮುಂದಾಗಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆ.ವ್ಹಿ.ಎಸ್.ಆರ್. ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ'ಲ್ಲಿ ಗುರುವಾರ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಗದಗ ಹಾಗೂ ಭೂಗೋಳಶಾಸ್ತ್ರ ವಿಷಯದ ಉಪನ್ಯಾಸಕರ ವೇದಿಕೆ ಗದಗ ಇವುಗಳ ಸಂಯುಕ್ತ ಆಶ್ರಯದಲ್ಲಿ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕನಕದಾಸ ಶಿಕ್ಷಣ ಸಮಿತಿಯ ಕಾರ್ಯಾಧ್ಯಕ್ಷ, ರಾಜ್ಯ ಬಿ.ಜೆ.ಪಿ. ಓ.ಬಿ.ಸಿ ಯುವ ಮೋರ್ಚಾ ಕಾರ್ಯದರ್ಶಿ ರವೀಂದ್ರನಾಥ ಬಿ.ದಂಡಿನ ವಹಿಸಿ ಮಾತನಾಡಿ, ಗದಗ ಜಿಲ್ಲೆಯಲ್ಲಿ ಇಂಥಹ ಕಾರ್ಯಾಗಾರವನ್ನು ಎಲ್ಲ ವಿಷಯದಲ್ಲಿ ಕೈಗೊಂಡಾಗ



ಮಾತ್ರ ಜಿಲ್ಲೆಗೆ ಉತ್ತಮ ಫಲಿತಾಂಶ ದೊರೆಯಲು ಸಾಧ್ಯ. ಭೂಗೋಳಶಾಸ್ತ್ರ ವಿಷಯದಲ್ಲಿ ಪ್ರತಿವರ್ಷ ನಮ್ಮ ಕಾಲೇಜಿನ ಕನಿಷ್ಠ 10 ವಿದ್ಯಾರ್ಥಿಗಳು 100ಕ್ಕೆ 100 ಅಂಕಗಳನ್ನು ಗಳಿಸುತ್ತಾ ಬಂದಿದ್ದಾರೆ. ಸತತ ಸಮಯ ಪ್ರಜ್ಞೆ ಜೊತೆಗೆ ನಿಮ್ಮ ಸಮಯವನ್ನು ಜ್ಞಾನಾರ್ಜನೆಗೆ ಮೀಸಲಿಟ್ಟಾಗ ಮಾತ್ರ ಉತ್ತಮ ಜೀವನವನ್ನು ರೂಪಿಸಿಕೊಂಡು ಕುಟುಂಬಕ್ಕೆ, ಸಮಾಜಕ್ಕೆ ಹಾಗೂ ತಮ್ಮ ಕಾಲೇಜಿಗೆ ಉತ್ತಮ ಹೆಸರು ತರಲು ಸಾಧ್ಯ ಎಂದರು.

ಶಾಲಾ ಶಿಕ್ಷಣ (ಪದವಿಪೂರ್ವ) ಇಲಾಖೆಯ ಗದಗ ಜಿಲ್ಲಾ ಉಪನಿರ್ದೇಶಕ ಸಿದ್ಧಲಿಂಗ ಬಂಡು ಮಸನಾಯಕ ಮಾತನಾಡುತ್ತಾ, ಗದಗ ಜಿಲ್ಲೆಯಲ್ಲಿ ಭೂಗೋಳಶಾಸ್ತ್ರ ವಿಷಯದ ಕಾರ್ಯಾಗಾರ ಹಮ್ಮಿಕೊಂಡಿರುವುದು ಸಂತೋಷದ ವಿಷಯವಾಗಿದ್ದು ಈ ಕಾರ್ಯಾಗಾರದ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಂಡು ಮುಂಬರುವ ದ್ವಿತೀಯ ಪಿ.ಯು.ಸಿ. ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ನೀಡಬೇಕೆಂದರು.

ಪ್ರಾ. ವ್ಹಿ.ಎಸ್. ದಲಾಲಿ ಮಾತನಾಡಿದರು. ಕಾಲೇಜಿನ ಭೂಗೋಳಶಾಸ್ತ್ರ ಉಪನ್ಯಾಸಕ ಪ್ರದೀಪ ಜಿ.ನಾಯಕ ಸ್ವಾಗತಿಸಿ ಪ್ರಾಸ್ತಾವಿಕ ನುಡಿದರು. ಗದಗ ಜಿಲ್ಲೆಯ ಭೂಗೋಳಶಾಸ್ತ್ರ ಉಪನ್ಯಾಸಕರ ವೇದಿಕೆಯ ಅಧ್ಯಕ್ಷ ಈರಣ್ಣ ವ್ಹಿ.ಕಮತರ ಕಾರ್ಯಕ್ರಮವನ್ನು ನಿರೂಪಿಸಿದರು. ನಗರಸಭೆ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ರಾಜೇಂದ್ರ ಹಿರೇಮಠ ವಂದಿಸಿದರು.

ಕಾರ್ಯಾಗಾರದಲ್ಲಿ ರಾಜೇಂದ್ರ ಹಿರೇಮಠ, ಎ.ಡಿ. ತಹಸೀಲ್ದಾರ, ಗೀತಾ ಮಳ್ಳೂರ ಸೇರಿದಂತೆ ಕೆ.ವ್ಹಿ.ಎಸ್.ಆರ್. ಮತ್ತು ಸಂಕೇತ ಪದವಿಪೂರ್ವ ಮಹಾವಿದ್ಯಾಲಯ ಗದಗ, ಕೆ.ವ್ಹಿ.ಎಸ್.ಆರ್. ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯ ತಿಮ್ಮಾಪೂರದ ವಿದ್ಯಾರ್ಥಿಗಳು, ಸಿಬ್ಬಂದಿ ವರ್ಗದವರಿದ್ದರು.

## ಕಿರುಕುಳ ನೀಡಿದರೆ ಸಹಾಯವಾಣಿಗೆ ಕರೆ ಮಾಡಿ

▶▶ಮೊದಲನೇ ಪುಟದಿಂದ

ತೊಂದರೆ ಕೊಡುತ್ತಿರುವ ಬಗ್ಗೆ ದೂರು ಬಂದಲ್ಲಿ ಮೈಕ್ರೋ ಫೈನಾನ್ಸ್ ವಿರುದ್ಧ ಕ್ರಮ ಜರುಗಿಸಲಾಗುತ್ತದೆ. ಸಾಮರ್ಥ್ಯಕ್ಕೆ ಅನುಗುಣವಾಗಿ ಸಾಲ ವಿತರಣೆ ಮಾಡಬೇಕು. ನಿಯಮ ಮೀರಿ ಸಾಲ ನೀಡಿ ಸಾಲಗಾರರ ಮೇಲೆ ದಬ್ಬಾಳಿಕೆ ನಡೆಸಿದಲ್ಲಿ ಅದಕ್ಕೆ ನಿಮ್ಮನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದೆಂದು ತಿಳಿಸಿದರು.

ಸಾಲ ಪಡೆಯುವ ವ್ಯಕ್ತಿಗೆ ಸಾಲ ಎಷ್ಟು, ಬಡ್ಡಿದರ, ಕಂತುಗಳು, ವಸೂಲಿ ಸ್ಥಳ, ವಸೂಲುಗಾರ ಯಾರು ಮುಂತಾದ ವಿವರ ಇರುವ ಕಾರ್ಡ್ ನೀಡಬೇಕು. ಮತ್ತು ತಮ್ಮ ಸಂಸ್ಥೆಯ ಕಚೇರಿಯಲ್ಲಿ ಅಥವಾ ವ್ಯವಹಾರದ ನಿರ್ದಿಷ್ಟ ಸ್ಥಳದಲ್ಲಿ ತಮ್ಮ ಮೈಕ್ರೊ ಫೈನಾನ್ಸ್ ಆರ್ಥಿಕ ಕಾರ್ಯಚಟುವಟಿಕೆಗಳ ಬಗ್ಗೆ ವಿವರವಾದ ಫಲಕವನ್ನು ಸಾರ್ವಜನಿಕರಿಗೆ ಅಥವಾ ಗ್ರಾಹಕರಿಗೆ ಕಾಣುವಂತೆ ಅಳವಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಮೈಕ್ರೊಫೈನಾನ್ಸ್ ಸಾಲ ವಸೂಲು ಮಾಡುವವರು ಸಾಲಗಾರರ ಜೊತೆ ಮಾನವೀಯತೆಯಿಂದ ನಡೆದುಕೊಳ್ಳುವದನ್ನು ಕಲಿಯಬೇಕು. ಕೇವಲ ವ್ಯಾಪಾರದ ದೃಷ್ಟಿಯಿಂದ ನಡೆದುಕೊಂಡಿದ್ದು ಕಂಡುಬಂದಲ್ಲಿ ದೂರು ಬರದೇ ಇದ್ದರೂ ಸೋಮೋಟೋ ಕೇಸ್ ದಾಖಲಿಸಿ, ಕಾನೂನು ರೀತಿಯಲ್ಲಿ ಕ್ರಮ ಕೈಗೊಳ್ಳಲಾಗುವುದೆಂದು ಅವರು ಎಚ್ಚರಿಕೆ ನೀಡಿದರು.

ಸಹಾಯವಾಣಿಗೆ ಕರೆ ಮಾಡಿ: ಜಿಲ್ಲೆಯಲ್ಲಿ ಮೈಕ್ರೋ ಫೈನಾನ್ಸ್ ಸೇರಿದಂತೆ ಇತರೆ ಯಾವುದೇ ಹಣಕಾಸು ಸಂಸ್ಥೆಯವರು ಸಾಲ ವಸೂಲಾತಿಯಲ್ಲಿ ಕಿರುಕುಳ ನೀಡಿದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸ್ಥಾಪಿಸಿರುವ ಸಹಾಯವಾಣಿ ಅಥವಾ ಟೋಲ್ ಫ್ರೀ ನಂಬರ್‌ಗೆ ಕರೆ ಮಾಡಿ, ಮಾಹಿತಿ ನೀಡಬಹುದು ಅಥವಾ ದೂರು ನಿವಾರಣಾ ಕೇಂದ್ರಕ್ಕೆ ಖುದ್ದಾಗಿ ಬಂದು ದಾಖಲೆಗಳೊಂದಿಗೆ ದೂರು ನೀಡಬಹುದು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಗೋಪಾಲ ಬ್ಯಾಕೋಡ ಮಾತನಾಡಿ, ಮೈಕ್ರೊ ಫೈನಾನ್ಸ್ ಹಾಗೂ ಇತರ ಸಾಲ ನೀಡುವ ಸಂಘಗಳು ಗ್ರಾಮೀಣ ಭಾಗದಲ್ಲಿ ಸಾಲ ವಸೂಲಾತಿಗೆ ಒತ್ತಡ ಹಾಕುತ್ತಿರುವ ಮಾಹಿತಿ ಬಂದಿದೆ. ಇವುಗಳನ್ನು ಬೀಟ್ ಪೊಲೀಸ್ ಹಾಗೂ ಇತರ ಮೂಲಗಳ ಮೂಲಕ ಪರಿಶೀಲಿಸಲಾಗುತ್ತಿದೆ. ಅಂತಹ ಪ್ರಕರಣಗಳು ಖಚಿತಪಟ್ಟಲ್ಲಿ ಅಂತಹ ಸದಸ್ಯರ ಹಾಗೂ ಸಂಬಂಧಿಸಿದವರ ಮೇಲೆ ಪ್ರಕರಣ ದಾಖಲಿಸಿ, ಕಾನೂನು ಕ್ರಮ ಜರುಗಿಸುವದಾಗಿ ತಿಳಿಸಿದರು.

ಆರ್.ಬಿ.ಐ.ನ ಸಹಾಯಕ ಪ್ರಧಾನ ವ್ಯವಸ್ಥಾಪಕ ಹಾಗೂ ಧಾರವಾಡ ಜಿಲ್ಲಾ ನೋಡಲ್ ಅಧಿಕಾರಿ ಅರುಣಕುಮಾರ ಮಾತನಾಡಿ, ಮೈಕ್ರೊ ಫೈನಾನ್ಸ್‌ನವರು ಸಾಲ ಕೊಡುವಾಗ ಯಾವುದಕ್ಕೆ ಸಾಲ, ಅವರ ಮರುಪಾವತಿ ಶಕ್ತಿ, ಉಪಯುಕ್ತತೆ ತಿಳಿದುಕೊಳ್ಳಬೇಕು. ನೀಡುವ ಸಾಲವು ಸಾಮಾನ್ಯ ಜನರ ಸ್ವಯಂ ಉದ್ಯೋಗ, ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜಕವಾಗಬೇಕು ಎಂದು ಹೇಳಿದರು. ಉಪವಿಭಾಗಾಧಿಕಾರಿ ಶಾಲಂ ಹುಸೇನ್ ಸ್ವಾಗತಿಸಿದರು. ಜಿಲ್ಲಾ ಅಗ್ರಣಿ ಬ್ಯಾಂಕ್‌ನ ವ್ಯವಸ್ಥಾಪಕ ಪ್ರಭುದೇವ ಎನ್.ಜಿ ಹಾಗೂ ಸಹಕಾರಿ ಸಂಘಗಳ ಉಪನಿಬಂಧಕ ರಮೇಶ ಬಗಲಿ ವಿವಿಧ ಹಣಕಾಸು ಸಂಸ್ಥೆಗಳ ಮಾಹಿತಿ ಹಾಗೂ ಅವುಗಳ ನಡೆಸುವ ವ್ಯವಹಾರದ ಬಗ್ಗೆ ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಉಪ ಪೊಲೀಸ್ ಆಯುಕ್ತ ಮಾನಿಂಗ ನಂದಗಾಂವಿ, ಜಿಲ್ಲೆಯ ವಿವಿಧ ತಾಲೂಕುಗಳ ಪೊಲೀಸ್ ಅಧಿಕಾರಿಗಳು, ತಹಸೀಲ್ದಾರರು, ಸಹಾಯಕ ನಿಬಂಧಕರು ಸೇರಿದಂತೆ ಜಿಲ್ಲೆಯಲ್ಲಿರುವ ಮೈಕ್ರೋ ಫೈನಾನ್ಸ್‌ದಾರರು, ವಿವಿಧ ಹಣಕಾಸು ಸಂಸ್ಥೆಗಳ ಪ್ರತಿನಿಧಿಗಳು, ಲೇವಾದೇವಿದಾರರು, ಗಿರಿವಿದಾರರು ಉಪಸ್ಥಿತರಿದ್ದರು.

### ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದ ನಾಗಮ್ಮ ಬಳ್ಳಾರಿ

## 'ಪಂಚ ಗ್ಯಾರಂಟಿ' ಬಡವರ ಹೊಟ್ಟೆ ತುಂಬಿಸಿದೆ

■ವಿಜಯಸಾಕ್ಷಿ ಸುದ್ದಿ, ಡಂಬಳ

ಇಡೀ ದೇಶದಲ್ಲಿಯೇ ಮೊಟ್ಟಮೊದಲ ಬಾರಿಗೆ ಬಡವರ ಹೊಟ್ಟೆ ತುಂಬಿಸುವ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಾರ್ಯ ಬಡವರ ಶಕ್ತಿಯನ್ನು ಇಮ್ಮಡಿಗೊಳಿಸಿ, ಆರ್ಥಿಕವಾಗಿ ಸಬಲರನ್ನಾಗಿಸಿದೆ ಎಂದು ಹಿರೇವಡ್ಡಟ್ಟಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ನಾಗಮ್ಮ ವೆಂಕಪ್ಪ ಬಳ್ಳಾರಿ ಹೇಳಿದರು.

ಡಂಬಳ ಹೋಬಳಿಯ ಹಿರೇವಡ್ಡಟ್ಟಿ ಗ್ರಾಮದಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯಡಿ 80 ಲಕ್ಷ ರೂ ವೆಚ್ಚದಲ್ಲಿ ಶರಣಪ್ಪ ನಂದಿಕೋಲ ಅವರ ಜಮೀನಿನಿಂದ ಕಳ್ಳಿಮನೆ



ಅವರ ಮನೆಯವರೆಗೆ ಚರಂಡಿ ನಿರ್ಮಾಣಕ್ಕೆ ಭೂಮಿ ಪೂಜೆಯನ್ನು ನೆರವೇರಿಸಿ ಅವರು ಮಾತನಾಡಿದರು.

ಈ ಭಾಗದ ರೈತರ ಹಿತಕ್ಕಾಗಿ ಪೇಠಾ ಆಲೂರ ಕೆರೆ ಸೇರಿದಂತೆ ಹಲವು ಕೆರೆಗಳಿಗೆ ನೀರು ತುಂಬಿಸುವುದರ ಮೂಲಕ ಮತ್ತು ಕೆರೆ-ಕಾಲುವೆಗಳನ್ನು ಉತ್ತಮವಾಗಿಸಲು ಕೋಟಿಗಟ್ಟಲೆ ಹಣವನ್ನು ತಂದು ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿರುವ ಶಾಸಕ ಜಿ.ಎಸ್. ಪಾಟೀಲ ಅವರ ಕಾರ್ಯಕ್ರಮಗಳು ರೈತರನ್ನು ಆರ್ಥಿಕವಾಗಿ ಸಬಲರನ್ನಾಗಿಸುತ್ತಿರುವುದು ಪ್ರಶಂಸನೀಯ ಎಂದರು.

ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ ಜಿ.ಪಾಟೀಲ ಮಾತನಾಡಿ, ರಾಜ್ಯ ಸರ್ಕಾರವು ಮಹಿಳಾ ಸಬಲೀಕರಣ ಮತ್ತು ಯುವ ಸಮುದಾಯದ ಶ್ರೇಯೋಭಿವೃದ್ಧಿಗಾಗಿ ಅನ್ನಭಾಗ್ಯ, ಗೃಹಲಕ್ಷ್ಮೀ, ಗೃಹ ಜ್ಯೋತಿ, ಶಕ್ತಿ ಯೋಜನೆಗಳೆಂಬ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಇದರ ಸಂಪೂರ್ಣ ಸದುಪಯೋಗಪಡೆದುಕೊಳ್ಳಲು ಮುಂದಾಗಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಗ್ರಾ.ಪಂ ಉಪಾಧ್ಯಕ್ಷ ಹನಮರಡ್ಡಿ ಮೇಟಿ, ಲೋಕಪ್ಪ ನಂದಿಕೋಲ, ಸದಸ್ಯರಾದ ಬಸಪ್ಪ ದ್ಯಾವಣ್ಣವರ, ಸಿದ್ದಪ್ಪ ಕರೆಕಲ್ಲ, ಜಂದಿಸಾಬ ಮುಂಡರಗಿ, ಕಾಶಪ್ಪ, ಅಬ್ದುಲ್ ಕಲಕೇರಿ, ಕಾಶಪ್ಪ ಶಿರುಂದ, ಹನಮಪ್ಪ ಶಿರುಂದ, ಸುರೇಶ ಮುಪ್ಪಿನೆಣ್ಣಿ, ಶರಣಪ್ಪ ಕುಂದರಳ್ಳಿ, ಉಮೇಶ ಕಿರಿಕಿರಿ, ಗ್ರಾಮದ ಹಿರಿಯರು, ಯುವಕರು, ಮಹಿಳೆಯರು ಇದ್ದರು.

## ಮೈಕ್ರೋ ಫೈನಾನ್ಸ್ ಹಾವಳಿಗೆ ಸಹಾಯವಾಣಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನಲ್ಲಿ ಮೈಕ್ರೋ ಫೈನಾನ್ಸ್ ಹಾವಳಿಗೆ ಸಹಾಯವಾಣಿ ಆರಂಭಿಸಲಾಗಿದ್ದು, ನೊಂದ ಸಾರ್ವಜನಿಕರು ಈ ಸೇವೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರವೇ ಪ್ರವೀಣಶೆಟ್ಟಿ ಬಣದ ತಾಲೂಕಾಧ್ಯಕ್ಷ ಮಹೇಶ ಕಲಘಟಗಿ ಹೇಳಿದರು.

ಈ ಕುರಿತು ಗುರುವಾರ ಪತ್ರಿಕಾ ಹೇಳಿಕೆ ನೀಡಿದ ಅವರು, ಈಗಾಗಲೇ ವೇದಿಕೆಯ ನಗರ ಘಟಕದಿಂದ ತಹಸೀಲ್ದಾರರಿಗೆ ಮನವಿ ಸಲ್ಲಿಸಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ಮೇಲಿಂದ ಮೇಲೆ ಮೈಕ್ರೋ ಫೈನಾನ್ಸ್‌ನವರ ಉಪಟಳದಿಂದ ಅನೇಕ ಅಹಿತಕರ ಘಟನೆಗಳು ನಡೆಯುವಂತಾಗಿದೆ. ರಾಜ್ಯ ಸರಕಾರ ಮೈಕ್ರೋ ಫೈನಾನ್ಸ್‌ಗಳ ವಿರುದ್ಧ ಸುಗ್ರೀವಾಜ್ಞೆ ಹೊರಡಿಸಲು ವಿನಾಕಾರಣ ವಿಳಂಬ ಮಾಡುತ್ತಿದ್ದು, ಕೂಡಲೇ ಸುಗ್ರೀವಾಜ್ಞೆಯ ಮೂಲಕ ಇವರನ್ನು ನಿಯಂತ್ರಿಸುವುದು ಅಗತ್ಯವಾಗಿದೆ.

ಮೈಕ್ರೋ ಫೈನಾನ್ಸ್‌ಗಳ ಈ ಹಾವಳಿಗೆ ಕರವೇ ಪ್ರವೀಣಶೆಟ್ಟಿ ಬಣದ ವತಿಯಿಂದ ನೊಂದ ಸಾರ್ವಜನಿಕರ ಬೆನ್ನೆಲುಬಾಗಿ ನಿಲ್ಲಲು ಸದಾ ಸಿದ್ಧವಾಗಿದ್ದು, ಸರಕಾರ ಮೈಕ್ರೋ ಫೈನಾನ್ಸ್‌ಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವವರೆಗೆ ನಮ್ಮ ವೇದಿಕೆಯಿಂದ ತಾತ್ಕಾಲಿಕ ಸಹಾಯವಾಣಿ ಸಂಖ್ಯೆಯನ್ನು ತೆರೆಯುತ್ತಿದೆ ಎಂದು ತಿಳಿಸಿದ್ದಾರೆ.

ಮೈಕ್ರೋ ಫೈನಾನ್ಸ್‌ಗಳ ಯಾವುದೇ ಪ್ರತಿನಿಧಿ ಮನೆಯ ಬಾಗಿಲಿಗೆ ಬಂದು ಕಾನೂನಿನ ಚೌಕಟ್ಟು ಮೀರಿ ನಡೆದುಕೊಂಡಲ್ಲಿ ಸಾರ್ವಜನಿಕರು ನಮ್ಮ ಸಹಾಯವಾಣಿ ಸಂಖ್ಯೆಗೆ ಕರೆ ಮಾಡಬಹುದು. ಲಕ್ಷ್ಮೇಶ್ವರ ತಾಲೂಕಿನಾದ್ಯಂತ ಮೊಬೈಲ್-8951213111 ಸಂಖ್ಯೆಗೆ ಬೆಳಿಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಕರೆ ಮಾಡಬಹುದು ಎಂದು ತಿಳಿಸಿದ್ದಾರೆ.

**ಗಾಂಧೀಜಿ ಹುತಾತ್ಮ ದಿನ, ಸೌಹಾರ್ದ ಸಂಕಲ್ಪ ದಿನದ ಪ್ರತಿಜ್ಞಾ ವಿಧಿ ಸಮಾರಂಭದಲ್ಲಿ ಬಿ.ಪೀರಭಾಷಾ**

# ಕೋಮುವಾದಿಗಳಿಂದ ದೇಶವನ್ನು ರಕ್ಷಿಸಬೇಕಿದೆ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಜಗತ್ತಿನ ಯಾವ ಧರ್ಮವೂ ಹಿಂಸಾರೂಪಿಗಳಾಗಲು ಮನುಷ್ಯರನ್ನು ಪ್ರಚೋದಿಸುವುದಿಲ್ಲ ಎಂದು ಪ್ರಗತಿಪರ ಚಿಂತಕ ಬಿ.ಪೀರಭಾಷಾ ಹೇಳಿದರು.

ನಗರದ ಕುಷ್ಟಗಿ ರಸ್ತೆಯ ಶಾದಿಮಹಲ್‌ನಲ್ಲಿ ಅಂಜುಮನ್ ಇಸ್ಲಾಂ ಕಮಿಟಿ, ಪ್ರಗತಿಪರ, ಕನ್ನಡಪರ, ರೈತಪರ, ಟಿಪ್ಪು ಸುಲ್ತಾನ್ ಕಮಿಟಿ, ಕಟ್ಟಡ ಕಾರ್ಮಿಕ, ಬೀದಿ ಬದಿ ವ್ಯಾಪಾರಸ್ಥರ, ಕೃಷಿ ಕೂಲಿಕಾರ, ಅಂಗನವಾಡಿ, ಬಿಸಿಯೂಟ, ಸಿಐಟಿಯು ಎಸ್.ಎಫ್.ಐ, ಡಿವಾಯ್‌ಎಫ್‌ಐ, ಸಂಘಟನೆಗಳ ಜಂಟಿ ಆಶ್ರಯದಲ್ಲಿ ನಡೆದ ಮಹಾತ್ಮ ಗಾಂಧಿಯವರ ಹುತಾತ್ಮ ದಿನ, ಸೌಹಾರ್ದ ಸಂಕಲ್ಪ ದಿನದ ಪ್ರತಿಜ್ಞಾ ವಿಧಿ ಸಮಾರಂಭದಲ್ಲಿ ಅವರು ಮಾತನಾಡಿದರು.

ಧರ್ಮದ ದುರುಪಯೋಗ ಮಾಡಿಕೊಳ್ಳುವುದನ್ನೇ ಹುಸಿ ಕರ್ತವ್ಯವಾಗಿ ಮಾಡಿಕೊಂಡ ಕೆಲವರು ದೇಶವನ್ನು ಒಡೆಯುತ್ತಿದ್ದಾರೆ. ಇತ್ತೀಚೆಗೆ ಕೋಮುವಾದಿಗಳು ಸಮಾನತೆಯ ಆಶಯಗಳನ್ನು ಬದಿಗೊತ್ತಿ ಭಾವೋದ್ರೇಕವನ್ನು ಸಹಜವಾಗಿಸುತ್ತಿದ್ದಾರೆ. ದ್ವೇಷದ ಬೆಂಕಿಯಲ್ಲಿ ಭಾರತದ ನೈಜ ಭಾವಕೋಶವನ್ನು ಸುಡುತ್ತಿದ್ದಾರೆ. ನಮ್ಮದು ಸೌಹಾರ್ದ ಭಾರತವೆಂಬ ಮನೋಧರ್ಮಕ್ಕೆ ಧಕ್ಕೆ ತರುತ್ತಿದ್ದಾರೆ. ಇಂತಹ



ಸಂಕಟದ ಸನ್ನಿವೇಶದಲ್ಲಿ ಗಾಂಧಿಯವರ ಸೌಹಾರ್ದ ಭಾರತದ ಪರಿಕಲ್ಪನೆ ತುಂಬಾ ಪ್ರಸ್ತುತವಾಗುತ್ತದೆ ಎಂದರು.

ಸಂಗಾತ ಪತ್ರಿಕೆಯ ಸಂಪಾದಕ ಟಿ.ಎಸ್. ಗೊರವರ, ಬಸವರಾಜ ಕೊಟಗಿ, ಎ.ಡಿ. ಕೋಲಕಾರ, ಕಾಲಜ್ಞಾನ ಶ್ರೀ ಶರಣಬಸವ ಸ್ವಾಮೀಜಿ ಮಾತನಾಡಿದರು. ಟೆಕ್ಕದ ದರ್ಗಾದ ನಿಜಾಮುದ್ದಿನಷಾ ಮಕಾನದಾರ ಸೌಹಾರ್ದ ಸಂಕಲ್ಪದಿನದ ಪ್ರತಿಜ್ಞಾವಿಧಿ ಭೋದಿಸಿದರು.

ಇದೇ ವೇಳೆ ಈದಿನ ಡಾಟ್ ಕಾಮ್‌ನ ನಮ್ಮ ಕರ್ನಾಟಕ ಸ್ಮರಣ ಸಂಚಿಕೆಯನ್ನು ಬಿಡುಗಡೆ ಮಾಡಲಾಯಿತು. ಪ್ರಗತಿಪರ ಚಿಂತಕ ಪ್ರೊ. ಬಿ.ಎ. ಕೆಂಚರೆಡ್ಡಿ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯ ಮೇಲೆ ನಿವೃತ್ತ ಶಿಕ್ಷಕ ಬಿ.ಎನ್. ಜಾಲಿಹಾಳ, ಕೃಷಿ ಕೂಲಿಕಾರರ ಸಂಘಟನೆ ಮುಖಂಡ ಬಾಲು ರಾಠೋಡ, ಡಿವಾಯ್‌ಎಫ್‌ಐ ಮುಖಂಡ ದಾವಲಸಾಬ ತಾಳಿಕೋಟಿ, ನಾಸೀರ ಸುರಪುರ, ಓದಸನೂರುಮಠ, ಮೆಹಬೂಬ್ ಹವಾಲ್ದಾರ್ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ನೀಲಮ್ಮ ಹಿರೇಮಠ, ಪ್ರಕಾಶ, ಮಾಸುಮಲಿ ಮದಗಾರ, ಚೆನ್ನಪ್ಪ ಗುಗಲೋತ್ತರ, ಬೀದಿಬದಿ ವ್ಯಾಪಾರಸ್ಥರು, ಅಂಗನವಾಡಿ ನೌಕರರು, ವಿದ್ಯಾರ್ಥಿಗಳು, ಕಟ್ಟಡ ಕಾರ್ಮಿಕರು ಪಾಲ್ಗೊಂಡಿದ್ದರು.

ಕಾರ್ಮಿಕ ಸಂಘಟನೆ ಮುಖಂಡ ಎಂ.ಎಸ್. ಹಡಪದ ಪ್ರಾಸ್ತಾವಿಕ ಮಾತನಾಡಿ, ಸೌಹಾರ್ದತೆಯನ್ನು ಜೀವಮಾನದುದ್ದಕ್ಕೂ ಪ್ರತಿಪಾದಿಸುತ್ತ ಬಂದ ಗಾಂಧಿಯವರ ಹತ್ಯೆ ಜಗತ್ತನ್ನೇ ತಲ್ಲಣಗೊಳಿಸಿತ್ತು. ಯಾವುದೇ ಧರ್ಮದ ಮೂಲಭೂತವಾದವು ಜೀವಹತ್ಯೆಗೂ ಹಿಂಜರಿಯುವುದಿಲ್ಲ ಎಂಬ ಅರಿವಿಗೊಂದು ಅಮಾನವೀಯ ಸಾಕ್ಷಿಯಾಗಿತ್ತು. ಎಲ್ಲ ಧರ್ಮಗಳ ಮೂಲಭೂತವಾದ ಎಷ್ಟರಮಟ್ಟಿಗೆ ಜೀವ ವಿರೋಧಿಯಾಗಬಲ್ಲದು ಎಂಬ ಕಠೋರ ವಾಸ್ತವವನ್ನು ಮನುಷ್ಯ ಮನಸ್ಸಿನವರೆಲ್ಲ ಅರ್ಥ ಮಾಡಿಕೊಳ್ಳಬೇಕಾದ ಜರೂರು ಅಂದಿಗೂ ಇಂದಿಗೂ ಇದೆ. ನಿಜವಾದ ಧರ್ಮ ಮತ್ತು ಮನೋಧರ್ಮಗಳು ಯಾವತ್ತೂ ಹಿಂಸೆ ಮತ್ತು ಹತ್ಯೆಗಳ ಅಸ್ತ್ರವಾಗುವುದಿಲ್ಲ. ನಾವು ಸೌಹಾರ್ದತೆಯ ಬದುಕನ್ನು ಉಳಿಸಿಬೇಕಿದೆ. ಕೋಮುವಾದಿಗಳಿಂದ ಈ ದೇಶವನ್ನು ರಕ್ಷಣೆ ಮಾಡಬೇಕಿದೆ ಎಂದರು.

ಚಂದ್ರು ರಾಠೋಡ ಸ್ವಾಗತಿಸಿದರು. ಫಯಾಜ್ ತೋಟದ ನಿರೂಪಿಸಿದರು.

# ಶ್ರೀ ವೀರಪ್ಪಜ್ಜನವರ ಭಾವಚಿತ್ರ ಮೆರವಣಿಗೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕೋಡಿಕೊಪ್ಪದ ಹಠಯೋಗಿ ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆಯ ಶತಮಾನೋತ್ಸವದ ನಿಮಿತ್ತ ಪಟ್ಟಣದಲ್ಲಿ ನಡೆದ ಶ್ರೀ ವೀರಪ್ಪಜ್ಜನವರ ಭಾವಚಿತ್ರದ ಮೆರವಣಿಗೆಯು ಭಕ್ತರ ಕಣ್ಮನಗಳಲ್ಲಿ ಸಂತೋಷವನ್ನು ತುಂಬಿತು. ಪಟ್ಟಣದ ಸಂತೆ ಬಜಾರನಲ್ಲಿರುವ ಶ್ರೀ ಗಣಪತಿ ದೇವಸ್ಥಾನದಿಂದ ಹೊರಟ ಮೆರವಣಿಗೆಗೆ ನಿಡಗುಂದಿಕೊಪ್ಪದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳವರು ಚಾಲನೆ ನೀಡಿದರು.



ಮೆರವಣಿಗೆ ಮುಂದೆ ಕುಂಭ ಹೊತ್ತ ಮಹಿಳೆಯರು, ಅಂಬೇಡ್ಕರ ನಗರದ ಯುವಕರ ಕೋಲಾಟ, ಡೊಳ್ಳು ಭಜನೆಯೊಂದಿಗೆ ಮೆರವಣಿಗೆಗೆ ವಿಶೇಷ ಕಳೆ ನೀಡಿದರು.

ರೋಣ ಬೂದೀಶ್ವರ ಮಠದ ಡಾ. ವಿಶ್ವನಾಥ ಸ್ವಾಮಿಗಳು ಮೆರವಣಿಗೆಯಲ್ಲಿ ಸಾಗಿದರು. ಮೆರವಣಿಗೆ ಈರಣ್ಣನ ಪಾದಗಟ್ಟಿ, ಭಾಗ್ಯ ನಗರದಿಂದ ಮಾರಿಕಾಂಬ ದೇವಸ್ಥಾನ, ಹಳೆ ಬಸ್‌ನಿಲ್ದಾಣ, ಮುಖ್ಯ ಬಸ್ ನಿಲ್ದಾಣದಿಂದ ಕೋಡಿಕೊಪ್ಪ ಮಾರ್ಗವಾಗಿ ಶ್ರೀ ವೀರಪ್ಪಜ್ಜನವರ ಮಠಕ್ಕೆ ತಲುಪಿ ಸಂಪನ್ನಗೊಂಡಿತು.

ಮೆರವಣಿಗೆಯಲ್ಲಿ ಪಾಲ್ಗೊಂಡ ಭಕ್ತರಿಗಾಗಿ ಶ್ರೀ ಕಟ್ಟಬಸವೇಶ್ವರ ಓಣಿಯ ಸಾರ್ವಜನಿಕರು ಅನ್ನ ಸಂತರ್ಪಣೆ ವ್ಯವಸ್ಥೆ ಮಾಡಿದ್ದರು. ಶ್ರೀ ವೀರಪ್ಪಜ್ಜನ ಮಠದ ಟ್ರಸ್ಟ್ ಕಮಿಟಿಯ ಸದಸ್ಯರು, ಪಟ್ಟಣದ ಅನೇಕ ಗಣ್ಯರು, ಮಜರೆ ಹಳ್ಳಿಗಳ ನಾಗರಿಕರು ಉತ್ಸಾಹದಿಂದ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

## ಗಾಂಧೀಜಿಯವರ ಪುಣ್ಯಸ್ಮರಣೆ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧೀಜಿಯವರ 77ನೇ ಪುಣ್ಯಸ್ಮರಣೆಯ ಅಂಗವಾಗಿ ಗದುಗಿನ ಸಬರಮತಿ ಆಶ್ರಮದಲ್ಲಿ ಗಾಂಧಿ ಸ್ಮರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದ ಭಾಗವಾಗಿ ಸರ್ವಧರ್ಮ ಪ್ರಾರ್ಥನೆ ಮತ್ತು ಹುತಾತ್ಮರಿಗೆ ಮೌನಾಚರಣೆಯ ಮೂಲಕ ಶ್ರದ್ಧಾಂಜಲಿಯನ್ನು ಸಲ್ಲಿಸಲಾಯಿತು.

ವಿಶ್ವವಿದ್ಯಾಲಯದ ಹಣಕಾಸು ಅಧಿಕಾರಿ ಪ್ರಶಾಂತ ಜೆ.ಸಿ ಮಾತನಾಡುತ್ತಾ, ಗಾಂಧೀಜಿಯವರ ಜೀವನ ಮತ್ತು ಅವರ ತತ್ವಗಳು ಎಂದಿಗೂ ಪ್ರಸ್ತುತ. ಗಾಂಧೀಜಿಯವರ ಶಾಂತಿ, ಸತ್ಯ ಮತ್ತು ಸಾಮರಸ್ಯದ ಸಂದೇಶವನ್ನು ಇಂದು ಜಗತ್ತಿನ ಎಲ್ಲ ಜನತೆಗೆ ಅಗತ್ಯವಿರುವುದಾಗಿ ಹೇಳಿದರು.




ನೆಹರು ಯುವ ಕೇಂದ್ರದ ಜಿಲ್ಲಾ ಸಮನ್ವಯ ಅಧಿಕಾರಿ ರಂಜನಿ ಮಾತನಾಡಿ, ಗಾಂಧೀಜಿಯವರ ತಾತ್ವಿಕತೆ, ನೈತಿಕತೆ ಮತ್ತು ದೇಶ ಪ್ರೇಮವನ್ನು ಮುಂದುವರೆಸಲು ಯುವಕರು ತಮ್ಮ ದೈನಂದಿನ ಜೀವನದಲ್ಲಿ ಗಾಂಧಿ ತತ್ವಗಳನ್ನು ಅನುಸರಿಸಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಬರಮತಿ ಆಶ್ರಮದ ಸಂಚಾಲಕರಾದ ಪ್ರಕಾಶ ಮಚೇನಹಳ್ಳಿ, ಸಂಶೋಧನೆ ಮತ್ತು ಅನ್ವೇಷಣೆ ಕೇಂದ್ರದ ಸಹಾಯಕ ನಿರ್ದೇಶಕರಾದ ಗಿರೀಶ್ ದೀಕ್ಷಿತ್, ನೆಹರು ಯುವ ಕೇಂದ್ರದ ಕಾರ್ಯಕ್ರಮ ಸಂಯೋಜಕ ರವಿ ಹೊಂಬಾಳೆ, ವಿಶ್ವವಿದ್ಯಾಲಯದ ಕಲಾ ನಿಕಾಯದ ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸಾರ್ವಜನಿಕರಿಂದ ಖಗೋಳ ವಿಸ್ಮಯ ವೀಕ್ಷಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಕೀಲ ಚಾಳದಲ್ಲಿ ಗುರುವಾರ ಖಗೋಳ ವಿದ್ಯಮಾನವಾದ ಗ್ರಹಗಳ ಪಥಸಂಚಲನವನ್ನು ದೂರದರ್ಶಕದ ಮುಖಾಂತರ ವೀಕ್ಷಿಸಲು ವಿಜ್ಞಾನ ಶಿಕ್ಷಕರಾದ ರಾಮಚಂದ್ರ ಮೋನೆಯವರ ನಿವಾಸದಲ್ಲಿ ಅನವು ಮಾಡಿಕೊಡಲಾಗಿತ್ತು.

ಇದರ ಪ್ರಯೋಜನವನ್ನು ಆಸಕ್ತ ಪುರುಷರು, ಮಹಿಳೆಯರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಪಡೆದುಕೊಂಡು, ಗುರು, ಶನಿ, ಮಂಗಳ ಮತ್ತು ಶುಕ್ರ ಗ್ರಹಗಳನ್ನು ಹಾಗೂ ಗುರು ಗ್ರಹದ ಪ್ರಮುಖ ಉಪಗ್ರಹಗಳನ್ನು ವೀಕ್ಷಿಸಿದರು. ಈ ಕಾರ್ಯಕ್ರಮದಲ್ಲಿ ಮಾಲತೇಶಗೌಡ ಪಾಟೀಲ, ಅಶೋಕ ಕುಲಕರ್ಣಿ, ಶಂಕರಭಟ್ಟ ಸೊರಟೂರ, ಗಣಪತಿ ಪುರಾಣಿಕ, ರವಿ ಪೂಜಾರ, ಸಿದ್ದು



ದೊಡ್ಡಣ್ಣವರ, ಗೋವಿಂದಸಾ ಕಬಾಡಿ, ಸಂಜಿವ ರೆಡ್ಡಿ, ಎನ್.ಬಿ. ಖಟವಟೆ, ವೈ.ಹೆಚ್. ದೇಸಾಯಿ, ಬಿ.ಎಮ್. ಕರಮುಡಿ, ಬಾಕಳೆ, ಶಾಲಿನಿ, ಶೈಲಜಾ, ಶ್ರದ್ಧಾ, ಸಾಕ್ಷಿ, ವರ್ಷಾ, ಮೇಘಾ, ವಿಕಾಸ, ಗೌತಮ, ದತ್ತು, ಪ್ರಣವ್, ಸಮರ್ಥ ಸೇರಿದಂತೆ 200ಕ್ಕೂ ಹೆಚ್ಚು ಆಸಕ್ತರು ಪಾಲ್ಗೊಂಡಿದ್ದರು. ನಿವೃತ್ತ ವಿಜ್ಞಾನ ಶಿಕ್ಷಕರಾದ ರಾಮಚಂದ್ರ ಮೋನೆ, ಕನ್ನಡ ಶಿಕ್ಷಕರಾದ ಸಂತೋಷ ಯರ್ಲಗಟ್ಟಿ ಹಾಗೂ ಎಮ್.ಎಮ್. ಮಕಾನದಾರ ಆಸಕ್ತರಿಗೆ ಮಾರ್ಗದರ್ಶನ ನೀಡಿದರು.

# ಒಳಮೀಸಲಾತಿ ಜಾರಿಗೊಳಿಸುವಂತೆ ಅಗ್ರಹಿಸಿ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಜಾತಿಯ ವಿವಿಧ ಉಪಜಾತಿಗಳಿಗೆ ಸೇರಿದವರ ಪ್ರಾತಿನಿಧ್ಯತೆ ವಿಚಾರವಾಗಿ ಮಾದಿಗ ಮತ್ತು ಸಂಬಂಧಿತ ಜನಾಂಗಳಿಗೆ ಕನಿಷ್ಠ ಶೇ.6 ಒಳಮೀಸಲಾತಿ ಅಥವಾ ಪ್ರತ್ಯೇಕ ಪರಿಶಿಷ್ಟ ಜಾತಿಯ ಶಾ.6 ಮೀಸಲಾತಿಗಾಗಿ ಶಿಫಾರಸ್ಸು ಮಾಡುವಂತೆ ಆದಿ ಜಾಂಬವ ಯುವ ಬ್ರಿಗೇಡ್‌ನ ಬೆಳಗಾವಿ ವಿಭಾಗೀಯ ಸಂಚಾಲಕ ಮಂಜುನಾಥ ಬುರಡಿ ಒತ್ತಾಯಿಸಿದರು.

ಈ ಕುರಿತು ಆದಿ ಜಾಂಬವ ಯುವ ಬ್ರಿಗೇಡ್ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, ಕರ್ನಾಟಕದಲ್ಲಿ ನೊಂದ



ಮತ್ತು ನಿಷ್ಠ ಅವಕಾಶಗಳಲ್ಲಿ ಅನ್ಯಾಯ ಅನುಭವಿಸುತ್ತಿರುವ ಜನಾಂಗಗಳು ಒಳಮೀಸಲಾತಿಗಾಗಿ ನ್ಯಾಯಯುತವಾದ ಹಕ್ಕೊತ್ತಾಯ ಮಾಡುತ್ತಿವೆ. ಆ ನಿಟ್ಟಿನಲ್ಲಿ ಪ್ರಾಯೋಗಿಕ ದತ್ತಾಂಶಗಳನ್ನು ಸಂಗ್ರಹಿಸಿ ಸರ್ಕಾರಕ್ಕೆ ವರದಿ ಮಾಡುವ ಅವಕಾಶ ತಮಗೆ ಲಭಿಸಿರುವುದು ನೊಂದ ಮತ್ತು ಅನ್ಯಾಯಕ್ಕೆ ಒಳಗಾದ ಜನಾಂಗಗಳಿಗೆ ಒಂದು ದೊಡ್ಡ ಭರವಸೆ ಮೂಡಿಸಿದೆ ಎಂದರು.

ಮಾದಿಗ ಮತ್ತು ಸಂಬಂಧಿತ ಜನಾಂಗಗಳಿಗೆ ನ್ಯಾಯಮೂರ್ತಿ ಎ.ಜೆ. ಸದಾಶಿವ ಆಯೋಗದ ಶಿಫಾರಸ್ಸಿನಂತೆ ಕನಿಷ್ಠ 69 ಒಳಮೀಸಲಾತಿ ನೀಡಲು ಶಿಫಾರಸ್ಸು ಮಾಡಬೇಕು. ನೊಂದ ಮಾದಿಗ ಮತ್ತು ಸಂಬಂಧಿತ ಜನಾಂಗಕ್ಕೆ ಒಳಮೀಸಲಾತಿ ಅನಿವಾರ್ಯವಾಗಿದ್ದು, ಇದನ್ನು ಕೂಡಲೇ ಜಾರಿ ಮಾಡುವ ಅಗತ್ಯತೆಯ ಬಗ್ಗೆ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಡಾ. ಬಾಬು ಜಗಜೀವನರಾಮ ಆದಿ ಜಾಂಬವ ಯುವ ಬ್ರಿಗೇಡ್‌ನ ಬೆಳಗಾವಿ ವಿಭಾಗೀಯ ಸಂಚಾಲಕ ಮಂಜುನಾಥ ಬುರಡಿ, ಡಿಎಸ್‌ಎಸ್ ಜಿಲ್ಲಾ ಸಂಚಾಲಕ ಡಿ.ಜಿ. ಕಟ್ಟಿಮನಿ, ಉಡಚಪ್ಪ ಹಳ್ಳಿಕೇರಿ, ಅಶೋಕ ಕುಡತಿನಿ, ಪ್ರವೀಣ ತಗ್ಗಿನಮನಿ, ಯಮನೂರ ಮಾದರ, ರಾಘವೇಂದ್ರ ಪರಾಪೂರ ಮುಂತಾದವರು ಇದ್ದರು.

# ವಾಣಿಜ್ಯ ಮಳಿಗೆಯ ಸುತ್ತ ಸ್ವಚ್ಛತಾ ಕಾರ್ಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಹುದಿನಗಳಿಂದ ಪಟ್ಟಣದ ಬಸ್‌ನಿಲ್ದಾಣದ ಎದುರುಗಡೆ ಇರುವ ಪುರಸಭೆಯ ವಾಣಿಜ್ಯ ಮಳಿಗೆಗಳ ಸುತ್ತಮುತ್ತಲಿನ ಪ್ರದೇಶದಲ್ಲಿ ಅನೇಕ ಸಣ್ಣ ಪುಟ್ಟ ವ್ಯಾಪಾರಸ್ಥರು, ಚಹಾ ಅಂಗಡಿಗಳು ವ್ಯಾಪಿಸಿದ್ದು, ಅಲ್ಲಿ ನಿತ್ಯ ಗಲೀಜು ತುಂಬಿಕೊಳ್ಳುತ್ತಿತ್ತು. ಮಳಿಗೆಗಳಿಗೆ ಬರುವ ಜನರು ಅಲ್ಲಿನ ಕಸವನ್ನು ನೋಡಿ ಅಸಹ್ಯ ಪಟ್ಟುಕೊಳ್ಳುವಂತಾಗಿತ್ತು. ಈ ಹಿನ್ನೆಲೆಯಲ್ಲಿ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಅವರು ವಾಣಿಜ್ಯ ಮಳಿಗೆಯ ಸುತ್ತಮುತ್ತಲಿನ ಅನೇಕ ಗೂಡಂಗಡಿಗಳನ್ನು ಪೊಲೀಸ್ ಇಲಾಖೆಯ ಸಹಕಾರದಿಂದ ತೆರುವುಗೊಳಿಸಿ ಅಲ್ಲಿನ ಕಸ-ಕಡ್ಡಿಗಳನ್ನು ಸ್ವಚ್ಛಗೊಳಿಸಿ ಗಮನ ಸೆಳೆದರು.



ಗುರುವಾರ ಮುಂಜಾನೆಯೇ ಕಾರ್ಯಾಚರಣೆಗಿಳಿದ ಮುಖ್ಯಾಧಿಕಾರಿ ಮತ್ತು ಸಿಬ್ಬಂದಿಗಳು, ಪೌರಕಾರ್ಮಿಕರ ತಂಡ ಗೂಡಂಗಡಿಗಳನ್ನು ತೆರವುಗೊಳಿಸುವ ಮೂಲಕ ಸ್ವಚ್ಛತೆಗೆ ಮುಂದಾದರು. ಕೆಲವರು ಈ ಕಾರ್ಯಕ್ಕೆ ವಿರೋಧ ವ್ಯಕ್ತಪಡಿಸಿದರಾದರೂ, ನಂತರ ತಮ್ಮ ತಮ್ಮ ಸಾಮಾನು-ಸರಂಜಾಮುಗಳನ್ನು ತೆಗೆದುಕೊಂಡು ಅಲ್ಲಿಂದ ಖಾಲಿ ಮಾಡಿದರು. ಬಹುದಿನಗಳಿಂದ ಇಲ್ಲಿನ ಸುತ್ತಮುತ್ತಲಿನ ಪ್ರದೇಶ ಕಸ ವಿಲೇವಾರಿ ಘಟಕದಂತಾಗಿದ್ದು ಜನರಿಗೆ ಬೇಸರ ತರಿಸಿತ್ತು. ಅಲ್ಲಿನ ಜನರಿಗೆ ತಿಳಿ ಹೇಳುವ ಮೂಲಕ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳಲಾಯಿತು.

ಮಳಿಗೆಯ ಹಿಂದುಗಡೆ ಪ್ರದೇಶವೂ ಸಹ ಅತಿ ಹೆಚ್ಚು ಗಲೀಜಿನಿಂದ ಕೂಡಿದ್ದು, ಅಲ್ಲಿ ಅನಾವಶ್ಯಕವಾಗಿರುವದನ್ನು ತೆರವುಗೊಳಿಸಿ ಸ್ವಚ್ಛಗೊಳಿಸಲಾಯಿತು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಾಧಿಕಾರಿ ಮಹೇಶ ಹಡಪದ, ಪುರಸಭೆಯವರು ಮುಖ್ಯ ಸ್ಥಳಗಳಲ್ಲಿ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳುತ್ತಿದ್ದು, ಈ ವಾಣಿಜ್ಯ ಮಳಿಗೆಯ ಸುತ್ತಲಿನ ಪ್ರದೇಶದಲ್ಲಿ ಆಗುತ್ತಿರುವ ಜನದಟ್ಟಣೆ, ಗಲೀಜಿನ ಬಗ್ಗೆ ನಾಗರಿಕರು ಮೌಖಿಕವಾಗಿ ದೂರು ಸಲ್ಲಿಸಿದ್ದರು. ಇಂದಿನಿಂದ ಇಲ್ಲಿ ಯಾವುದೇ ಗೂಡಂಗಡಿಗಳನ್ನು ಹಚ್ಚುವಂತಿಲ್ಲ. ದಾರಿಯಲ್ಲಿ ಯಾರಾದರೂ ಕೂಡುವದು, ಸಣ್ಣಪುಟ್ಟ ವ್ಯಾಪಾರ ಮಾಡುವದನ್ನೂ ಸಹ ನಿಲ್ಲಿಸಬೇಕು ಎಂದರು.

ಈ ಸಂದರ್ಭದಲ್ಲಿ ಪುರಸಭೆ ಸಿಬ್ಬಂದಿಗಳು, ಪೌರಕಾರ್ಮಿಕರು ಹಾಗೂ ಸಾರ್ವಜನಿಕರು ಇದ್ದರು.



ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರಾಗಿ ನೇಮಕವಾದ ರಾಜಾರಾಮ್ ಪವಾರರನ್ನು ನಗರಸಭೆ ಸದಸ್ಯರಾದ ಪರವೀನ್ ಬಾನು ಅಬ್ದುಲ್ ಮುನಾಫ್ ಮುಲ್ಲಾ, ಮೇಹಬೂಬಸಾಬ್ ಡಿ.ನದಾಫ್ (ಚುಮ್ಮಿ), ಕಾಂಗ್ರೆಸ್ ಮುಖಂಡ ಮುನ್ನಾ ರಶ್ಮಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ನಗರಸಭೆ ಮಾಜಿ ಸದಸ್ಯ ಅನಿಲ ಗರಗ, ಕಾಂಗ್ರೆಸ್ ಮುಖಂಡ ರಜಾಕ್ ಉಪಸ್ಥಿತರಿದ್ದರು.


BRENSOL

**WALK-IN INTERVIEW**

Batliboi Renewable Energy Solutions Pvt Ltd. (formerly Batliboi enXco) is a part of the Batliboi Group of companies in India. We are pioneers in Operations & Maintenance & Installation of Wind Turbine Generators and Wind Farm Parks spread in Tamilnadu, Andhra Pradesh, Karnataka, Maharashtra and Gujarat.

**Company Name** : **BATLIBOI RENEWABLE ENERGY SOLUTIONS PRIVATE LIMITED**
**Venue** : Door No 66, Ward No 4, 2nd Cross, Vishnuteertha Nagar, Kushtagi, Kushtagi (PO) Koppal Dist, Karnataka - 583 277.
**Interview Date** : **03-02-2025.**

**Position Available**

| Name of Position | Function | Qualification | Experience | Location | No. of Positions |
|---|---|---|---|---|---|
| Supervisor | HT Line | Diploma / BE - Elect | 3+ Year | Tawargere | 2 |
| Safety Officer | Safety | Any Graduation | 3+ Year | | 1 |
| Store keeper | Store | Any Graduation | 1+Year | | 2 |
| Office assistant | | Any Graduation | 1+Year | | 1 |
| Accountant | | B.com | 1+Year | | 1 |

Interested candidates, please carry a copy of your resume and qualification proof and last three month pay slips.
Send your CV on : **raghavendra.v@brensol.co.in, hanumantappa.m@brensol.co.in**
**Website** : **www.brensol.co.in**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka